ವಿಜಯಪುರ | ಸಂಪುಟ 01 | ಸಂಚಿಕೆ 297 | ಪುಟ 4 | ₹ 3.00

https://udayarashminews.com udayarashmi 7026028778

# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com Title Code: KARKAN28047 ಭಾನುವಾರ, ಜನವರಿ 21, 2024

"ವಿಜಯಪುರದಿಂದ ತಿರುಪತಿಗೆ ರೈಲು ಸಂಚಾರ ಆರಂಭಿಸುವಂತೆ ಬಹು ದಿನಗಳ ಬೇಡಿಕೆಯಾಗಿದೆ. ಜನರಿಗೆ ನೇರವಾದ ಮಾರ್ಗವಿಲ್ಲದಿರುವುದ-ರಿಂದ ಈ ಕುರಿತು ಕೇಂದ್ರ ರೇಲ್ವೆ ಸಚಿವರೊಂದಿಗೆ ಚರ್ಚಿಸಲಾಗಿದೆ.



– ರಮೇಶ ಜಿಗಜಿಣಗಿ
ಸಂಸದರು, ವಿಜಯಪುರ

ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಿಸಿಲ್ಲ । ಸುಳ್ಳು ವರದಿ ಸೃಷ್ಟಿ । ಪ್ರಕರಣ ಮುಚ್ಚಿ ಹಾಕಲು ಯತ್ನ

# ರೇಪಿಸ್ಟ್ ಆರೋಪಿಗಳ ಪರ ಸರ್ಕಾರ :ಬೊಮ್ಮಾಯಿ

**ಉದಯರಶ್ಮಿ ನ್ಯೂಸ್**

ಹುಬ್ಬಳ್ಳಿ: ಅಪರಾಧ ಕೃತ್ಯ ಎಸಗಿದವರಲ್ಲಿ ವೋಟ್ ಬ್ಯಾಂಕ್ ಇದೆ. ಈ ಕಾರಣದಿಂದಲೇ ಕರ್ನಾಟಕ ರಾಜ್ಯ ಸರ್ಕಾರ ಅಪರಾಧ ಚಟುವಟಿ-ಕೆಗಳಲ್ಲಿ ತೊಡಗಿರದವರನ್ನು ರಕ್ಷಣೆ ಮಾಡುವ ಕೆಲಸ ಮಾಡುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಆಪಾದಿಸಿದರು.

ಹಾನಗಲ್‌ನಲ್ಲಿ ಗ್ಯಾಂಗ್ ರೇಪ್ ಪ್ರಕರಣವನ್ನು ಖಂಡಿಸಿ ಶನಿವಾರ ಪ್ರತಿಭಟನೆ ಮಾಡುವ ವೇಳೆ ಸುದ್ದಿಗಾರರ ಜೊತೆಗೆ ಮಾತನಾಡಿದ ಅವರು, ಸಿದ್ದರಾಮಯ್ಯನವರ ನೇತೃತ್ವದ ರಾಜ್ಯ ಸರ್ಕಾರದಲ್ಲಿ ಕ್ರಿಮಿನಲ್‌ಗಳಿಗೆ ಕುಮಕ್ಕು ಸಿಗುತ್ತಿದೆ. ಅಪರಾಧ ಕೃತ್ಯ ಎಸಗಿದವರಲ್ಲಿ ವೋಟ್ ಬ್ಯಾಂಕ್ ಇದೆ ಎಂದು ಅವರು ಕಿಡಿ ಕಾರಿದರು.

ಹಾನಗಲ್‌ನಲ್ಲಿ ನಡೆದ ಸಾಮೂಹಿಕ ಅತ್ಯಾಚಾರದಂತಹ ಘಟನೆಗಳು ಮೇಲಿಂದ ಮೇಲೆ ನಡೆಯುತ್ತಿವೆ. ಇಷ್ಟಾದರೂ ಪೊಲೀಸ್ ಇಲಾಖೆ ಕಣ್ಮುಚ್ಚಿ ಕುಳಿತಿದೆ. ಗ್ಯಾಂಗ್ ರೇಪ್ ಪ್ರಕರಣದಲ್ಲಿ ಸರಿಯಾದ ರೀತಿಯಲ್ಲಿ ತನಿಖೆ ನಡೆಯುತ್ತಿದೆ ಎನ್ನುತ್ತಾರೆ. ಹಾಗಾದರೆ ಇಬ್ಬರು ಪೊಲೀಸರನ್ನ ಅಮಾನತು ಮಾಡಿದ್ದು ಏಕೆ..? ಎಂದು ಅವರು ಪ್ರಶ್ನಿಸಿದರು.

ಅತ್ಯಾಚಾರಕ್ಕೊಳಗಾದ ಸಂತ್ರಸ್ತೆಗೆ ಸರಿಯಾದ ರೀತಿಯಲ್ಲಿ ಚಿಕಿತ್ಸೆ ಕೊಡವುದು ಇವರಿಂದ ಆಗಿಲ್ಲ. ಇಂತಹ ಘಟನೆಯಾದಾಗ ಸರ್ಕಾರವೇ ಸಂತ್ರಸ್ತರಿಗೆ ಚಿಕಿತ್ಸೆ ಕೊಡಿಸುವ ಕೆಲಸ ಮಾಡಬೇಕು. ಈ ಪ್ರಕರಣವನ್ನ



ಎಸ್‌ಐಟಿಗೆ ತನಿಖೆಗೆ ಕೊಡಬೇಕೆಂದು ಅವರು ಆಗ್ರಹಿಸಿದರು.

ಹೋರಾಟಕ್ಕೆ ಸರ್ಕಾರ ಬಗ್ಗದೆ ಹೋದರೆ ಕಾನೂನು ಹೋರಾಟ ಮಾಡುತ್ತೇನೆ ಎಂದರು.

ಆಡಳಿತ ವ್ಯವಸ್ಥೆ ರೇಪಿಸ್ಟ್ ಜೊತೆಗೆ ನಿಂತಿದೆ. ಪೊಲೀಸರು ಪಕ್ಷಪಾತ ಮಾಡಿ, ಕೇಸ್ ಮುಚ್ಚುತ್ತಿದ್ದಾರೆ ಎಂದು ಆಪಾದಿಸಿದರು.

ಪೋಕ್ಸೋ ಕಾಯ್ದೆಯಲ್ಲಿ ರೇಪ್ ಎಂದು ದೂರು ಕೊಟ್ಟರೆ ಕೂಡಲೇ ಎಫ್‌ಐಆರ್ ಮಾಡಿ ತನಿಖೆ ಮಾಡಬೇಕು. ಆದರೆ ಅದನ್ನು ಕೂಡ ಮಾಡಲೇ ಇಲ್ಲ. ಪ್ರಕರಣ ನಡೆದು ಐದು ದಿನಕ್ಕೆ ದಾಖಲೆ ಮಾಡಲಾಗಿದ್ದು, ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲು ಮಾಡಿಲ್ಲ. ಸುಳ್ಳು ವರದಿ ಸೃಷ್ಟಿಸಿದ್ದಾರೆ. ಇದೆಲ್ಲ ನೋಡಿದರೆ ಪೊಲೀಸರು ಪ್ರಕರಣ ಮುಚ್ಚಿ ಹಾಕಲು ಯತ್ನಿಸುತ್ತಿದ್ದಾರೆ ಎಂಬುದು ಇದರಿಂದ ಸ್ಪಷ್ಟವಾಗುತ್ತದೆ ಎಂದು ಬೊಮ್ಮಾಯಿ ಆಪಾದಿಸಿದರು.

ವಿಜಯಪುರ ಆಕ್ಸ್‌ಫರ್ಡ್ ಸಮೂಹ ಶಿಕ್ಷಣ ಸಂಸ್ಥೆ ಹಾಗೂ ಅಮ್ಮ ಮಡಿಲು ಚಾರಿಟೇಬಲ್ ಸಂಸ್ಥೆ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಅಭಿಮತ

# ಶಿಕ್ಷಣದೊಂದಿಗೆ ಸಂಸ್ಕಾರ, ಸಂಸ್ಕೃತಿ ಬೆಳೆಸುವ ಶಿಕ್ಷಣ ಸಂಸ್ಥೆಗಳು

**ಉದಯರಶ್ಮಿ ನ್ಯೂಸ್**

ಸಿಂದಗಿ: ಶಿಕ್ಷಣ ಸಂಸ್ಥೆಗಳು ಶಿಕ್ಷಣ ನೀಡುವ ಜೊತೆಗೆ ಸಂಸ್ಕಾರ, ಸಂಸ್ಕೃತಿಯನ್ನು ಬೆಳೆಸುತ್ತದೆ ಎಂದು




ವಿಜಯಪುರ ಆಕ್ಸ್‌ಫರ್ಡ್ ಸಮೂಹ ಶಿಕ್ಷಣ ಸಂಸ್ಥೆ ಹಾಗೂ ಅಮ್ಮ ಮಡಿಲು ಚಾರಿಟೇಬಲ್ ಸಂಸ್ಥೆಯ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಹೇಳಿದರು.

ಪಟ್ಟಣದ ಕಲಬುರಗಿ ರಸ್ತೆಯ ಹೊರವಲಯದಲ್ಲಿರುವ ಲೋಯಲ್ ಶಾಲೆಯಲ್ಲಿ ಜರುಗಿದ ವಾರ್ಷಿಕ ಸ್ನೇಹ ಸಮ್ಮೇಳನವನ್ನು ಉದ್ಘಾಟಿಸಿಅವರು ಮಾತನಾಡಿದರು.

ವಿದ್ಯಾರ್ಥಿಗಳಲ್ಲಿ ಉತ್ತಮ ಸಂಸ್ಕಾರ, ಮಾನವೀಯ ಮೌಲ್ಯಗಳನ್ನು ಬೆಳೆಸಿ ಸಮಾಜದ ಉತ್ತಮ ಆಸ್ತಿಯನ್ನಾಗಿ ರೂಪಿಸುವುದು ಶಿಕ್ಷಣ ಸಂಸ್ಥೆಗಳ ಜವಾಬ್ದಾರಿಯಾಗಿದೆ. ಶಿಕ್ಷಣ ನೌಕರಿಗಾಗಿ ಅಲ್ಲ. ಅದು ಜ್ಞಾನಕ್ಕಾಗಿ. ಶಿಕ್ಷಣ ಕಲಿತು ನಾನು ರೈತ ಎಂದು ಹೇಳಿಕೊಳ್ಳಲು ನಾಚಿಕೊಳ್ಳಬೇಡಿ. ಯಾವುದಾದರೂ ಕೆಲಸ ಆಗಲಿ ಅದನ್ನು ಶ್ರದ್ಧೆಯಿಂದ ಮಾಡಿ ಅದರಲ್ಲಿ ತೃಪ್ತಿಯನ್ನು ಕಾಣಬೇಕು ಎಂದು ಬಬಲೇಶ್ವರ ನುಡಿದರು.

ಈ ವೇಳೆ ವಿಜಯಪುರ ಜೆಸ್ವಿಟ್ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷ ಫಾದರ್ ಫ್ರಾನ್ಸಿಸ್ ಮೆನೇಜಸ್, ಫಾದರ್ ಮ್ಯಾಕ್ಸಿಮ್, ಫಾದರ್ ರಾಬರ್ಟ್, ಪತ್ರಕರ್ತ ಸಲೀಮ್ ಪಟೇಲ್ ಮರ್ತೂರ್. ಸಿಆರ್.ಪಿ ಎನ್.ಎಸ್. ತಿಳಗೂಳ, ನಾಗೇಶ್ ರೆಡ್ಡಿ, ರಫೀಕ್ ವಡಗೇರಿ, ಸಿದ್ದಪ್ಪ ಎಂ. ಸೇರಿದಂತೆ ಶಾಲೆಯ ಶಿಕ್ಷಕರು, ಸಿಬ್ಬಂದಿ ಹಾಗೂ ಮಕ್ಕಳು ಇದ್ದರು.

# ವಿಜಯಪುರ–ತಿರುಪತಿ ರೈಲು ಸಂಚಾರಕ್ಕೆ ಸಂಸದರಿಂದ ಪತ್ರ

**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರದಿಂದ ತಿರುಪತಿಗೆ ನೇರ ರೈಲುಸಂಚಾರ ಆರಂಭಿಸುವಂತೆ ಸಂಸದರಾದ ರಮೇಶ ಜಿಗಜಿಣಗಿ ಅವರು ಹುಬ್ಬಳ್ಳಿ ರೇಲ್ವೆ ಜನರಲ್ ಮ್ಯಾನೇಜರ್ ಅವರಿಗೆ ಪತ್ರ ಬರೆದಿದ್ದಾರೆ.

ವಿಜಯಪುರದಿಂದ ತಿರುಪತಿಯ ಮಧ್ಯ ಸಂಚರಿಸುವ ರೈಲನ್ನು ಆರಂಭಿಸುವಂತೆ ಸಾರ್ವಜನಿಕರ ಬಹದಿನಗಳ ಬೇಡಿಕೆಯಾಗಿದ್ದು, ಈ ಕುರಿತು ಕೇಂದ್ರ ರೇಲ್ವೆ ಸಚಿವರೊಂದಿಗೂ ಚರ್ಚಿಸಲಾಗಿದೆ. ಜನರಿಗೆ ನೇರವಾದ ಮಾರ್ಗವಿಲ್ಲದೇ ಇರುವುದರಿಂದ ಪ್ರಯಾಣಕ್ಕೆ ಅನುಕೂಲ ಒದಗಿಸುವ




ನಿಟ್ಟಿನಲ್ಲಿ ಶೀಘ್ರವಾಗಿ ವಿಜಯಪುರ – ತಿರುಪತಿ ಮಧ್ಯ ರೈಲನ್ನು ಪ್ರಾರಂಭಿಸಿ ಜನರಿಗೆ ಅನುಕೂಲ ಕಲ್ಪಿಸುವಂತೆ ಅವರು ಪತ್ರ ಬರೆದು ಕೋರಿದ್ದಾರೆ.

## ರಾಜ ನುಡಿ

ಕೆಲವು ದಾರಿಗಳು ಕೇವಲ ಕರೆದೊಯ್ಯಲೆಂದೇ ಇರುತ್ತವೆಯೇ ಹೊರತು ಮರಳಿ ತಂದು ಬಿಡಲಲ್ಲಾ. ಹೀಗಾಗಿ ತೆರಳಿದ ಅಭಿಮನ್ಯು ಮರಳಲೇ ಇಲ್ಲಾ. ಅಪೂರ್ಣ ಮಾಹಿತಿಯುಳ್ಳ ಅಭಿಮನ್ಯುವಿಗೂ, ಸಂಪೂರ್ಣ ಮಾಹಿತಿಯುಳ್ಳ ಅರ್ಜುನನಿಗೂ ಇರುವ ವ್ಯತ್ಯಾಸವೇ ಇದು. ಬದುಕಿನ ದಾರಿಯಲಿ ಜಾಗರುಕರಾಗಿರಿ ಮುಂದೆ ಚಕ್ರವ್ಯೂಹಗಳಿವೆ..

–ಡಾ. ರಾಜಶೇಖರ ನಾಗೂರ



## ವಚನ ಚಿಂತನ 283

*ಜ್ಯೋತಿರ್ಲಿಂಗದ ತೇಜ ಶತಕೋಟಿ ಸೂರ್ಯರು ಮೂಡಿದಂತೆ*

*ನಿಮ್ಮ ತೇಜವ ನೋಡಲೆಂದು ಹೆರಸಾರಿ ನೋಡುತ್ತಿರಲು*
*ಶತಕೋಟಿ ಸೂರ್ಯರು ಮೂಡಿದಂತೆ ಇರ್ದುದಯ್ಯಾ !*
*ಮಿಂಚಿನಬಳ್ಳಿಯ ಸಂಚವ ಕಂಡೆ, ಎನಗಿದು ಸೋಜಿಗವಾಯಿತ್ತು !*
*ಗುಹೇಶ್ವರಾ ನೀನು ಜ್ಯೋತಿರ್ಲಿಂಗವಾದಡೆ ಉಪಮಿಸಿ ನೋಡಬಲ್ಲವರಿಲ್ಲಯ್ಯಾ.*
*– ಅಲ್ಲಮಪ್ರಭುಗಳು*

ಹನ್ನೆರಡನೆಯ ಶತಮಾನದಲ್ಲಿ ಶರಣರು ದೇವರನ್ನು ಕಂಡ ಬಗೆಯನ್ನು ತಮ್ಮ ವಚನಗಳಲ್ಲಿ ವಿವರಿಸಿದ್ದಾರೆ, ಅದು ಈ ಮುಂಚಿನವರು ವಿವರಿಸಿದ ಕಾಲ್ಪನಿಕ ವರ್ಣನೆಯಲ್ಲ. ದೇವರು ಎನ್ನುವ ಪದವು ಸಂಸ್ಕೃತದ "ದೀವ" ಎನ್ನುವ ಪದದಿಂದ ಉತ್ಪತ್ತಿಯಾಗಿದೆ, ದೀವ ಎಂದರೆ ಬೆಳಕು. ದೇವರ ಈ ನಿಜ ಸ್ವರೂಪವನ್ನೇ ಕಂಡಿರುವುದಾಗಿ ಮೇಲಿನ ವಚನದಲ್ಲಿ ಅಲ್ಲಮರು ವಿವರಿಸಿದ್ದಾರೆ. ಇಷ್ಟಲಿಂಗದಲ್ಲಿ ಕಂಡ ಆ ದೇವರರೂಪ ಅವರಿಗೆ ನೂರು ಸೂರ್ಯರ ಬೆಳಗಿಗೆ ಸಮವಾಗಿತ್ತು, ಅದು ಮಿಂಚಿನ ಬಳ್ಳಿಯ ತೆರದಿ ಕ್ಷಣಮಾತ್ರದಲ್ಲಿ ಗೋಚರಿಸಿ ಮಾಯವಾಗುತ್ತದೆ. ಆ ಕಾರಣಕ್ಕಾಗಿ ದೇವನನ್ನು ಜ್ಯೋತಿರ್ಲಿಂಗವೆಂದು ಕರೆದಿದ್ದಾರೆ. ಕೊನೆಯದಾಗಿ ಅದಕ್ಕೆ ಉಪಮೆಯವಾಗಿ ಯಾವುದು ನಿಲ್ಲುವುದಿಲ್ಲ. ಆದುದರಿಂದ ಅದು ಉಪಮಾತೀತ ಆ ಅನುಭಾವವು ವರ್ಣನಾತೀತವೆಂದಿರುವರು. ಶರಣರು ಕಂಡ ದೇವರು ಬಯಲು, ಬೆಳಗು, ಘನ, ಅನಂತ. ಆ ಅನುಭಾವದ ಅನುಭವ ನಮ್ಮದಾಗಲಿ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

# ಕಾಲುವೆ ಮೂಲಕ ಕೆರೆ ತುಂಬಿಸಲು ರೈತ ಸಂಘ ಆಗ್ರಹ

**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ಲಾಲ್ ಬಹಾದ್ದೂರ್ ಶಾಸ್ತ್ರಿ ಜಲಾಶಯ ವ್ಯಾಪ್ತಿಯ ಅಖಂಡ ವಿಜಯಪುರ ಜಿಲ್ಲೆಯ ಜನರ ಕುಡಿಯುವ ನೀರಿಗಾಗಿ ಕಾಲುವೆಗಳ ಮೂಲಕ ಕೆರೆ ತುಂಬಿಸಬೇಕು ಎಂದು ರಾಜ್ಯರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾಧ್ಯಕ್ಷ ನಿಂಗರಾಜ ಆಲೂರ ಆಗ್ರಹಿಸಿದರು.

ಶನಿವಾರ ಆಲಮಟ್ಟಿಯಲ್ಲಿರುವ ಶ್ರೀರಾಮಲಿಂಗೇಶ್ವರ ದೇವಸ್ಥಾನದಿಂದ ಪಾದಯಾತ್ರೆಯಲ್ಲಿ ಎಸ್‌ಬಿಐ ಬ್ಯಾಂಕ್ ಮಾರ್ಗವಾಗಿ ಕೃಷ್ಣಾ ಭಾಗ್ಯ ಜಲ ನಿಗಮದ ಮುಖ್ಯ ಅಭಿಯಂತರರ ಕಚೇರಿಗೆ ತೆರಳಿ ಮನವಿ ಅರ್ಪಿಸಿ ಮಾತನಾಡಿದರು.

ಕೃಷ್ಣಾ ಮೇಲ್ದಂಡೆ ಯೋಜನೆಯ ಅನುಷ್ಠಾನಕ್ಕಾಗಿ ಲಕ್ಷಾಂತರ ಎಕರೆ ಜಮೀನು, ನೂರಾರು ಊರುಗಳು



ಮುಳುಗಡೆಯಾಗಿ ಲಕ್ಷಾಂತರ ಕುಟುಂಬಗಳು ಸಂತ್ರಸ್ಥರಾಗಿರುವ ಜಿಲ್ಲೆಯ ಜನ-ಜಾನುವಾರುಗಳಿಗೆ ಕುಡಿಯುವ ನೀರಿಗಾಗಿ ಪರದಾಡುವಂತೆ ಮಾಡಲು ಅಧಿಕಾರಿಗಳು ಕೃತಕ ಅಭಾವ ಸೃಷ್ಟಿಸುತ್ತಿದ್ದಾರೆ. ರಾಜ್ಯದಲ್ಲಿ ಮುಂಗಾರು-ಹಿಂಗಾರು ಮಳೆಗಳು ಸಮರ್ಪಕವಾಗಿ ಸುರಿಯದಿದ್ದರೂ ಕೃಷ್ಣೆಯ ಉಗಮಸ್ಥಾನ ಮಹಾಬಲೇಶ್ವರ ಮತ್ತು ಕೃಷ್ಣೆಯ ಉಪನದಿಗಳ ಜಲಾನಯನ ಪ್ರದೇಶದಲ್ಲಿ ಮಳೆಯಾಗಿದ್ದರಿಂದ ಕೃಷ್ಣೆಗೆ ನೀರು ಹರಿದುಬಂದು ಜನತೆಯ ದಾಹ ನೀಗಿಸುವಂತಾಗಿದೆ ಎಂದರು.

ಬರದ ಜಿಲ್ಲೆಯೆಂದೇ ಖ್ಯಾತಿ ಪಡೆದಿರುವ ವಿಜಯಪುರ ಜಿಲ್ಲೆಯಲ್ಲಿ ಬೃಹತ್ ಜಲಾಶಯ ನಿರ್ಮಿಸಿ ನೂರಾರು ಟಿಎಮ್‌ಸಿ ನೀರು ಸಂಗ್ರಹ ಮಾಡಿಕೊಂಡಿದ್ದರೂ ಜಿಲ್ಲೆಯ ಜನರಿಗೆ ನೀರು ಕೊಡಲು ಮಾತ್ರ ಮೀನ-ಮೇಷ ಎಣಿಸುವದೇಕೆ? ಆಲಮಟ್ಟಿ ಜಲಾಶಯದ ಸಹೋದರ ಜಲಾಶಯವಾಗಿರುವ ಬಸವಸಾಗರ ಜಲಾಶಯ ವ್ಯಾಪ್ತಿಯ ರೈತರು ನೀರು ಕೇಳಿದಾಗ ನೀರು ಕೊಡುವ ನೀವುಗಳು ಆಲಮಟ್ಟಿ ಜಲಾಶಯ ವ್ಯಾಪ್ತಿಯ ಜಿಲ್ಲೆಯ ಜನರಿಗೆ ನೀರು ಕೊಡಲು ಸಬೂಬು ಹೇಳುವದಾದರೂ ಏಕೆ ಎಂದು ಆಕ್ರೋಶವ್ಯಕ್ತಪಡಿಸಿದರು.

ಉಪ ಮುಖ್ಯ ಅಭಿಯಂತರ ಸುರೇಶ ಅವರಿಗೆ ರೈತ ಸಂಘಟನೆಯ ಪದಾಧಿಕಾರಿಗಳು ಆಲಮಟ್ಟಿ ಜಲಾಶಯ ವ್ಯಾಪ್ತಿಯ ಎಲ್ಲಾ ಕೆರೆಗಳನ್ನು ತುಂಬಿಸಲು ಕೂಡಲೇ ಕ್ರಮಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಇದಕ್ಕೆ ಉತ್ತರಿಸಿದ ಉಪ ಮುಖ್ಯ ಅಭಿಯಂತರರು ಇತ್ತೀಚೆಗಷ್ಟೇ ಕಾಲುವೆಗಳ ಮೂಲಕ ಕೆರೆಗಳನ್ನು ತುಂಬಿಸಲಾಗಿದೆ ಎಂದರು.

ಇದಕ್ಕೆ ಆಕ್ರೋಶಗೊಂಡ ರೈತರು ನಮ್ಮೊಂದಿಗೆ ನಡೆಯಿರಿ ಕಿರಿಶ್ಯಾಳ, ಶೀಕಳವಾಡಿ ಕೆರೆಗಳು ಸೇರಿದಂತೆ ಅವಳಿ ಜಿಲ್ಲೆಯ ಬಹುತೇಕ ಕೆರೆಗಳು ಖಾಲಿಯಾಗುತ್ತಿವೆ ಎಂದು ಅಧಿಕಾ-ರಿಯನ್ನು ತರಾಟೆಗೆಗ ತಗೆದುಕೊಂಡರು.


ಈ ಸಂದರ್ಭದಲ್ಲಿ ಅಧಿಕಾ-ರಿಗಳಾದ ಸಹಾಯಕ ಕಾರ್ಯಪಾಲಕ ಅಭಿಯಂತರುಗಳಾದ ಐ.ಎಲ್. ಕಳಸಾ, ಹೆರೂರ ಮಠ ಹಾಗೂ ರೈತ ಮುಖಂಡರಾದ ನಿಡಗುಂದಿ ತಾಲ್ಲೂಕು ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ಅಧ್ಯಕ್ಷ ಸೀತಪ್ಪ ಗಣಿ, ಸಾಬಣ್ಣ ಅಂಗಡಿ, ವೆಂಕಟೇಶ ವಡ್ಡರ, ರವಿಶಂಕರ ಕೋತಿನ್, ರಮೆಶ ವಡ್ಡರ, ಪೀರಸಾಬ ನದಾಫ, ಶಶಿಕಾಂತ ಪಾಟೀಲ, ರಾಯವ್ವ ಮೇಟಿ, ಪಾರುಬಾಯಿ ಲಮಾಣಿ, ಶಾಂತವ್ವ ಮಡಿವಾಳರ, ಸುಭಾಸ ಚೋಪಡೆ, ಸಂಗಮೇಶ ಹೊನಕಟ್ಟಿ ಮೊದಲಾದವರಿದ್ದರು.

# ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಲಾರಿ ಚಾಲಕರ ಪ್ರತಿಭಟನೆ

**ಉದಯರಶ್ಮಿ ನ್ಯೂಸ್**

ಇಂಡಿ: ಲಾರಿ ಚಾಲಕರಿಗೆ ಮಾರಕವಾದ ಕಾನೂನು ಜಾರಿ ಮಾಡಿದ ಕೇಂದ್ರ ಸರ್ಕಾರದ ನಡೆಯನ್ನು ಖಂಡಿಸಿ, ಕೂಡಲೇ ಕಾನೂನು ವಾಪಸ್ ಪಡೆದುಕೊಳ್ಳಬೇಕೆಂದು ಆಗ್ರಹಿಸಿ ಶುಕ್ರವಾರ ಇಂಡಿ ತಾಲ್ಲೂಕು ಲಾರಿ ಚಾಲಕರ ಸಂಘದ ಅಡಿಯಲ್ಲಿ ಬೃಹತ್ ಪ್ರತಿಭಟನೆ ನಡೆಸಿ ಕಂದಾಯ ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ ಅವರಿಗೆ ಚಾಲಕರು ಮನವಿಪತ್ರ ಸಲ್ಲಿಸಿದರು.

ಲಾರಿ ಚಾಲಕರ ಸಂಘದ ಅಧ್ಯಕ್ಷ ಮೈಬೂಬ್ ಟಾಂಗೇವಾಲೆ ಮಾತನಾಡಿ, ಕೇಂದ್ರ ಸರ್ಕಾರ ಭಾರತೀಯ ನ್ಯಾಯ ಸಂಹಿತೆ (ಬಿಎನೆಸ್ 2023) ಕಾಯ್ದೆಯನ್ನು ದಿನಾಂಕ 2024ರ



ಏಪ್ರಿಲ್ ರಿಂದ ಅನ್ವಯವಾಗುವಂತೆ ಜಾರಿ ಮಾಡಿದ್ದು, ಈ ಹೊಸ ಕಾನೂನು ವ್ಯವಸ್ಥೆಯನ್ನು ವಾಹನ ಉದ್ಯಮಕ್ಕೆ ಸಂಬಂಧಿಸಿದ ಹಲವು ನಿಯಮಗಳು ತುಂಬಾ ಕಠಿಣವಾಗಿದ್ದು, ಅದರಲ್ಲೂ ಸೆಕ್ಷೆನ್ 106 (1) ಮತ್ತು ಸೆಕ್ಷೆನ್ 106 (2) ಅಡಿಯಲ್ಲಿ ಯಾವದೇ ವಾಹನ ಚಾಲಕರು ಅಪಘಾತವನ್ನು ಮಾಡಿ ಯಾವದೇ ನಾಗರಿಕರ ಸಾವಿಗೆ ಕಾರಣವಾದರೆ ಚಾಲಕನಿಗೆ 10 ವರ್ಷಗಳವರೆಗೆ ಕಠಿಣ ಶಿಕ್ಷೆ ಮತ್ತು 7 ಲಕ್ಷಗಳ ವರೆಗೆ ದಂಡವನ್ನು ನ್ಯಾಯಾಲಯ ವಿಧಿಸಬಹುದಾಗಿದೆ.

ಲಾರಿ ಚಾಲಕರು ತಿಂಗಳಿಗೆ 12 ರಿಂದ 15 ಸಾವಿರ ಸಂಬಳ ಪಡೆದುಕೊಂಡು ಕೆಲಸದಲ್ಲಿದ್ದೇವೆ. ಅಪಘಾತ ಸಂಭವಿಸಿದರೆ ದಂಡದ ಹಣ ಎಲ್ಲಿಂದ ಕಟ್ಟಲು ಸಾಧ್ಯ ಎಂದು ಪ್ರಶ್ನಿಸಿರುವ ಅವರು, ಸರ್ಕಾರ ಈ ಕೂಡಲೇ ಈ ಕಾಯ್ದೆಯ ಬಗ್ಗೆ ಮತ್ತೊಮ್ಮೆ ಪರಿಶೀಲನೆ ಮಾಡಿ ವಾಪಸ್ ಪಡೆದುಕೊಳ್ಳಬೇಕೆಂದು ಆಗ್ರಹಿಸಿದರು.

ಸರ್ಕಾರ ನಮ್ಮ ಬೇಡಿಕೆಯನ್ನು ಈಡೇರಿಸದಿದ್ದರೆ ದೇಶದಾದ್ಯಂತ ಲಾರಿ ಚಾಲಕರು ಲಾರಿ ಚಾಲನೆಯ ಕೆಲಸ ಬಿಟ್ಟು ಕೂಲಿ ಕೆಲಸಕ್ಕೆ ಹೋಗಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ ಅವರು, ಇದರ ಗಂಬೀರ ಪರಿಣಾಮ ಸರ್ಕಾರ ಎದು-ರಿಸಬೇಕಾಗುತ್ತದೆ ಎಂದರು.

ಪ್ರತಿಭಟನೆಯಲ್ಲಿ ಮುಕ್ತಾರ ಟಾಂಗೇವಾಲೆ, ಜಾವೀದ ಹೊನ್ನುಟಗಿ, ಉಮೇಶ ಹೊಸಮನಿ, ಅಂಬಣ್ಣ ಕಾಂಬಳೆ, ಖಾಜೇಸಾಬ ಬಾಗವಾನ, ಮುಸ್ತಾಕ ಗೌಂಡಿ, ಸೈಪನ್ ಬಾಗವಾನ, ಹುಸೇನಿ ಮಕಾಲೆ, ಮಾಂತೇಶ ತೋಡಕರ, ಉದಯ ಗುಡಿಮನಿ, ಸಂತೋಷ ಕಣ್ಣಿ, ಬಾಳುಸುಲಾಖೆ, ಶಂಕರಪೂಜಾರಿ, ಅಯೂಬ ಶೇಖ, ನಾಸಿಕ್ ಬಾಗವಾನ, ಭೀಮಾಶಂಕರ ಬಿರಾದಾರ ವಹಿಸಿಕೊಂಡಿದ್ದರು.

# ಸೀತನಿ: ರುಚಿಕರ ಆಹಾರ–ಆರೋಗ್ಯಕ್ಕೂ ಹಿತಕರ

ಉದಯರಶ್ಮಿ ನ್ಯೂಸ್-
ಸಂತೋಷ ಬಂಡೆ, ಶಿಕ್ಷಕರು



ವಿಜಯಪುರ: ಉತ್ತರ ಕರ್ನಾಟಕದ ಬಹುತೇಕ ಜಿಲ್ಲೆಗಳಲ್ಲಿ ಬಿಳಿ ಜೋಳ ಬೆಳೆಯಲಾಗುತ್ತದೆ. ಇದು ಈ ಭಾಗದ ಬಹುಮುಖ್ಯವಾದ ಬೆಳೆಗಳಲ್ಲಿ ಒಂದಾಗಿದೆ. ಈ ಜೋಳದ ತೆನೆ ಕಾಳು ಕಟ್ಟುವ ಹಂತದಲ್ಲಿದ್ದುದನ್ನು ಹಾಲ್ದೆನೆ ಅಥವಾ ಸೀತನಿ ಎಂದು ಕರೆಯುವರು.

ಸೀತನಿ ಸೇವನೆಯಿಂದ ಆರೋಗ್ಯಕ್ಕೆ ಹಲವಾರು ಲಾಭಗಳು ಉಂಟು. ಸಾಮಾನ್ಯವಾಗಿ ಒಂದು ನೂರು ಗ್ರಾಂ ಸೀತನಿ ಸೇವಿಸಿದರೆ 316 ಗ್ರಾಂ ಕ್ಯಾಲೋರಿ, 10 ಗ್ರಾಂ ಪ್ರೊಟೀನ್, 3 ಗ್ರಾಂ ಫ್ಯಾಟ್, 6 ಗ್ರಾಂ ಫೈಬರ್, 69 ಗ್ರಾಂ ಕಾರ್ಬೋಹೈಡ್ರೇಟ್ಸ್ ಲಭಿಸಲಿದೆ ಎನ್ನುವದು ಶಿಕ್ಷಕರಾದ ಸಂತೋಷ ಬಂಡೆ ಅವರ ಅಭಿಪ್ರಾಯವಾಗಿದೆ.

ಇದರಲ್ಲಿರುವ ವಿಟ್ಯಾಮಿನ್ "ಬಿ" ಚರ್ಮ ಮತ್ತು ಕೂದಲಿಗೆ ಒಳ್ಳೆಯ ಪೋಷಕಾಂಶ ಒದಗಿಸುತ್ತದೆ. ಸೀತನಿಯಲ್ಲಿರುವ ಮ್ಯಾಗ್ನೀಶಿಯಂ ಎಲುಬು ಮತ್ತು ಹೃದಯಕ್ಕೆ ಹೆಚ್ಚು ಪ್ರಯೋಜನಕಾರಿ. ಇದೊಂದು ಫೈಬ–ರಿನ ಮೂಲ ಎಂದರೆ ತಪ್ಪಾಗದು ಎಂದು ಶಿಕ್ಷಕ ರಾಘವೇಂದ್ರ ಮೊಗಳ ಅಭಿಪ್ರಾಯ ವ್ಯಕ್ತಪಡಿಸಿದರು.


ಸೀತನಿಯು ರಕ್ತದಲ್ಲಿನ ಸಕ್ಕರೆ ಅಂಶ ನಿಯಂತ್ರಿಸಲು ಮತ್ತು ಮುಖ್ಯವಾಗಿ ದೇಹದ ತೂಕ ಹೆಚ್ಚಾಗದಂತೆ ನೋಡಿಕೊಳ್ಳುವುದು. ಜೋಳದ ಹಾಲ್ತೆನೆಗಳನ್ನು ಬೆಂಕಿಯ ಕೆಂಡದಲ್ಲಿ ಸುಟ್ಟು ನಂತರ ಅವುಗಳನ್ನು ಬಡಿದು ರಸ ಭರಿತ ಹಸಿರು ಕಾಳುಗಳನ್ನು ಬೇರ್ಪಡಿಸಿ ಸವಿದರೆ, ಅದರ ರುಚಿ ಸವಿದವನೇ ಬಲ್ಲ. ಹಾಲು ತುಂಬಿದ ಜೋಳದ ಕಾಳುಗಳು ಸೇವಿಸಿದರೆ ಆರೋಗ್ಯಕರವಾಗಿರುತ್ತದೆ. ಅದು ಶಕ್ತಿ ಭರಿತವಾದ ಆಹಾರ. ಅದರ ರುಚಿಯೇ ವಿಭಿನ್ನ. ಜನವರಿ ಫೆಬ್ರವರಿ ತಿಂಗಳನ್ನು ಸೀತನಿ ಸುಗ್ಗಿ ಎಂದು ಕರೆಯುತ್ತಿದ್ದರು.

ಸೀತನಿ ಹೊಲದಲ್ಲೇ ತಯಾರಿಸಿ, ಬಿಸಿ ಬಿಸಿಯಾಗಿದ್ದಾಗಲೇ ಹಸಿರು ಕಾಳು ಸವಿಯಬೇಕಾದ ಖಾದ್ಯ. ಇದರ ಜೊತೆಗೆ ಬೆಲ್ಲ, ಉಪ್ಪು, ಶೇಂಗಾ, ಹಿಂಡಿ ತಿನ್ನುವವರೂ ಇದ್ದಾರೆ. ಒಂದೊಂದು ಭಾಗದಲ್ಲಿ ಒಂದೊದು ಪದಾಥ–ಗವನ್ನು ಸೀತನಿ ಜತೆ ತಿನ್ನುತ್ತಾರೆ. ಮುಸ್ಸಂಜೆಯಲ್ಲಿ ಬೆಚ್ಚನೆಯ ಕೆಂಡದ ಮುಂಬಾಗ ಕುಳಿತು, ಸುಡವ ಎಳೆಯ ಜೋಳದ ಕಾಳುಗಳನ್ನು ಸವಿಯುವ ಮಜ ವರ್ಣಿಸಲು ಅಸಾದ್ಯ ಎಂದು ರೈತ ಅಪ್ಪಾಸಿ ಹೊಸಟ್ಟಿ ಅವರ ಅನಿಸಿಕೆಯಾಗಿದೆ.

ಸೀತನಿ ತಿನ್ನುವುದು ಎಂದರೆ ಅದೊಂದು ಸಂತಸ ಸಂಭ್ರಮ ಪಡುವ ಸಂಗತಿಯಾಗಿತ್ತು. ಆದರೆ ಇತ್ತೀಚೆಗೆ ಕೇವಲ ಬೀಗರು, ನೆಂಟರು ಬಂದರೆ ಮಾತ್ರ ಸೀತನಿ ಸವಿಯುತ್ತಾರೆ. ಜೋಳದ ಸೀತನಿ ಸಮಯದಲ್ಲಿ ಅದರ ಕಬ್ಬು ಸಹ ಸಿಹಿಯಾಗಿರುತ್ತದೆ. ಅದು ಸಹ ಹಿಂದೆ ಸೇವನೆ ಮಾಡುತ್ತಿದ್ದರು. ಅಲ್ಲದೆ ಸೀತನಿ ಕಬ್ಬು ಜಾನುವಾರುಗಳಿಗೂ ಸಹ ಪ್ರಿಯವಾದ ಆಹಾರ ಮತ್ತು ಅವುಗಳಿಗೆ ಅದ್ಭುತವಾದ ಶಕ್ತಿ ನೀಡುವ ಔಷಧಿಯಾಗಿತ್ತು. ಇಂದು ಸೀತನಿ ಕಬ್ಬು ಮರೆಯಾಗಿದೆ.

# ತುಷಾರ್ ಚಲನಚಿತ್ರಕ್ಕೆ ಭಾವೈಕ್ಯತೆಯ ಪ್ರಶಸ್ತಿ

ಉದಯರಶ್ಮಿ ನ್ಯೂಸ್-



ಸಿಂದಗಿ: ಪಟ್ಟಣದ ಯುವನಟ, ನಿರ್ದೇಶಕ, ನಿರ್ಮಾಪಕ ವಿಶ್ವಪ್ರಕಾಶ ಮಲಗೊಂಡ ಅವರ ಮಲಗೊಂಡ ಫಿಲಂ ಪ್ರೊಡಕ್ಷನ್ ಅಡಿಯಲ್ಲಿ ನಿರ್ಮಾಣಗೊಂಡ ತುಷಾರ್ ಚಿತ್ರಕ್ಕೆ ಬಾಗಲಕೋಟೆಯ ಸಿದ್ದನಕೊಳ್ಳದಲ್ಲಿ ಜರುಗಿದ 2024ನೇ ಅಂತರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ಭಾವೈಕ್ಯ ಸಾರುವ ಹಾಗೂ ಸಾಮಾಜಿಕ ಸಂದೇಶವುಳ್ಳ ಒಳ್ಳೆಯ ಚಿತ್ರ ಎಂದು ಪರಿಗಣಿಸಿ ಅವಾರ್ಡ್ ನೀಡಲಾಗಿದೆ.

ಇದೇ ಸಂದರ್ಭದಲ್ಲಿ ಶ್ರೀ ಸಿದ್ದನಕೊಳ್ಳ ಮಠದ ಡಾ.ಶಿವಕುಮಾರ ಸ್ವಾಮಿಗಳು, ಚಿತ್ರನಟ ಶೋಭರಾಜ್, ಕೆಜಿಎಫ್ ಸಿನಿಮಾ ಖ್ಯಾತಿಯ ಸಾಹಿತಿ ಹಾಗೂ ಚಿತ್ರ ನಿರ್ದೇಶಕ ಕಿನ್ನಾಳ ರಾಜ್, ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ, ಕೆಪಿಸಿಸಿ ಸದಸ್ಯೆ ರಕ್ಷಿತಾ ಇಟಿ, ಉದ್ಯಮಿ ಕಾಂಗ್ರೆಸ್ ಹಿರಿಯ ನಾಯಕ ಸಿದ್ದಣ್ಣ ಮೇಟಿ, ನಟ ನಿರ್ದೇಶಕ ನಿರ್ಮಾಪಕ ಡಾ.ಪ್ರಭು ಗಂಜಿಹಾಳ ಸೇರಿದಂತೆ ಅನೇಕರು ಇದ್ದರು.

# ಜ.22 ರಾಮಮಂದಿರ ಉದ್ಘಾಟನೆ: ಸಿದ್ಧಸಿರಿ ಸಿಬ್ಬಂದಿಗೆ ರಜೆ

ಉದಯರಶ್ಮಿ ನ್ಯೂಸ್

ವಿಜಯಪುರ: ರಾಮ ಮಂದಿರ ಉದ್ಘಾಟನೆಯ ಅಮೂಲ್ಯ ಕ್ಷಣ–ಕ್ಕೆ ಸಾಕ್ಷಿಯಾಗಲು, ಜನವರಿ 22 ಸೋಮವಾರದಂದು ಸಿದ್ಧಸಿರಿ ಸೌಹಾರ್ದ ಸಹಕಾರಿಯ 158 ಶಾಖೆಗಳಿಗೆ ರಜೆ ಘೋಷಿಸಿ, ಸಿದ್ಧಸಿರಿ ಸೌಹಾರ್ದದ ಅಧ್ಯಕ್ಷರು, ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ಅವರು ಆದೇಶ ಹೊರಡಿಸಿದ್ದಾರೆಂದು ಜಂಟಿ ವ್ಯವಸ್ಥಾಪಕ ನಿರ್ದೇಶಕ ರಾಘವ್ ಅಣ್ಣಿಗೇರಿ ತಿಳಿಸಿದ್ದಾರೆ.



500 ವರ್ಷಗಳ ತಪಸ್ಸು, ಕೋಟ್ಯಂತರ ಹಿಂದೂ ಕಾರ್ಯಕರ್ತರು, ಸ್ವಾಮೀ–ಜಿಗಳು, ಸಾಧು–ಸಂತರ ಕನಸು ನನಸಾಗುತ್ತಿದೆ. ಜ.22 ನಮ್ಮ ದೇಶದ ಭವಿಷ್ಯದ, ಭಾರತದ ಸ್ವಾಭಿಮಾನದ ಸಂಕೇತ, ಹಿಂದುತ್ವದ ಸ್ವಾಭಿಮಾನದ ಸಂಕೇತ, ಮೊಘಲರ ದಬ್ಬಾಳಿಕೆಯ ಗುಲಾಮಗಿರಿ ತೊಲಗಿಸಿದ ಸಂಕೇತದ ದಿನವಾಗಿದೆ. ಈ ದಿನ ಅವಿಸ್ಮರಣೀಯಗೊಳಿಸಲು, ಅಯೋಧ್ಯ ರಾಮ ಮಂದಿರ ಉದ್ಘಾಟನೆಯ ದಿನವಾದ ಜ.22 ರಂದು ನಡೆಯುವ ವಿಜಯೋತ್ಸವ ಸಮಾರಂಭಗಳಲ್ಲಿ ಭಾಗವಹಿಸಲು ಅನುಕೂಲವಾಗುವಂತೆ ರಾಜ್ಯದ ವಿವಿಧೆಡೆ ಕಾರ್ಯನಿರ್ವಹಿಸುತ್ತಿರುವ 158 ಸಿದ್ಧಸಿರಿ ಸೌಹಾರ್ದ ಶಾಖೆಗಳ ನೌಕರರಿಗೆ ರಜೆ ನೀಡಲಾಗಿದೆ.

ಈ ರಜೆ ದಿನವನ್ನು ಸದ್ಬಳಕೆ ಮಾಡಿಕೊಂಡು ಪ್ರತಿಯೊಬ್ಬ ಸಿಬ್ಬಂದಿಯೂ ತಮ್ಮ ಗ್ರಾಮ, ಪಟ್ಟಣ, ನಗರಗಳಲ್ಲಿ ಜರುಗುವ ಶ್ರೀರಾಮ ಉತ್ಸವದಲ್ಲಿ ಭಾಗ ವಹಿಸಬೇಕು. ಅಲ್ಲದೆ, ತಮ್ಮ ತಮ್ಮ ಮನೆಗಳ ಮೇಲೆ ಪವಿತ್ರ ಭಗವಾ ಧ್ವಜಗಳನ್ನು ಹಾ–ರಿಸುವದರೊಂದಿಗೆ, ಮನೆಗಳ ಮುಂದೆ ಐದು ದೀಪಗಳನ್ನು ಬೆಳಗಿಸುವ ಮೂಲಕ ಶ್ರೀರಾಮನಿಗೆ ಗೌರವ ಸಲ್ಲಿಸಬೇಕೆಂದು ಎಂದು ಸಿದ್ಧಸಿರಿ ಸೌಹಾರ್ದ ಸಹಕಾರಿಯ ಜಂಟಿ ವ್ಯವಸ್ಥಾಪಕ ನಿರ್ದೇಶಕ ರಾಘವ್ ಅಣ್ಣಿಗೇರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲಕ್ಷ ದೀಪ ಬೆಳಗಿಸಲು ಶಾಸಕ ಯತ್ನಾಳ ಕರೆ

ಉದಯರಶ್ಮಿ ನ್ಯೂಸ್

ವಿಜಯಪುರ: ರಾಮ ಮಂದಿರ ಉದ್ಘಾಟನೆಯ ಈ ಐತಿಹಾಸಿಕ ಕ್ಷಣವು, ನಮ್ಮೆಲ್ಲರ ಜೀವನದಲ್ಲಿ ಅದೃಷ್ಟವಶಾತ್ ಬಂದಿದೆ. ಈ ಅಮೂಲ್ಯ ಕ್ಷಣಕ್ಕೆ ನಾವೆಲ್ಲ ಸಾಕ್ಷಿಯಾಗಲು, ಪ್ರತಿಯೊಬ್ಬರ ಮನೆಯಲ್ಲಿ ದೀಪ ಬೆಳಗಿಸುವಂತೆ ಹೆಮ್ಮೆಯ ಪ್ರಧಾನಮಂತ್ರಿಗಳಾದ ನರೇಂದ್ರ ಮೋದಿಯವರು ಕರೆ ನೀಡಿದ್ದು, ನಗರದಲ್ಲಿ ಕನಿಷ್ಠ ಒಂದು ಲಕ್ಷ ದೀಪೋತ್ಸವ ಬೆಳಗಿಸಬೇಕು ಎಂದು ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, 500 ವರ್ಷಗಳ ತಪಸ್ಸು, ಕೋಟ್ಯಂತರ ಹಿಂದೂ ಕಾರ್ಯಕರ್ತರು, ಸ್ವಾಮೀಜಿಗಳು, ಸಾಧು–ಸಂತರ ಕನಸು ನನಸಾಗುತ್ತಿದೆ. ಜ.22 ನಮ್ಮ ದೇಶದ ಭವಿಷ್ಯದ, ಭಾರತದ ಸ್ವಾಭಿಮಾನದ ಸಂಕೇತ, ಹಿಂದುತ್ವದ ಸ್ವಾಭಿಮಾನದ ಸಂಕೇತ, ಮೊಘಲರ ದಬ್ಬಾಳಿಕೆಯ ಗುಲಾಮಗಿರಿ ತೊಲಗಿಸಿದ ಸಂಕೇತದ ದಿನವಾಗಿದೆ. ಈ ದಿನ ಅವಿಸ್ಮರಣೀಯಗೊಳಿಸಲು, ಅಯೋಧ್ಯ ರಾಮ ಮಂದಿರ ಉದ್ಘಾಟನೆಯ ದಿನವಾದ ಜ.22 ರಂದು ನಗರದಲ್ಲಿ ಕನಿಷ್ಠ ಒಂದು ಲಕ್ಷ ದೀಪ ಬೆಳಗಬೇಕು. ಈ ನಿಟ್ಟಿನಲ್ಲಿ ಪ್ರತಿ ಹಿಂದುಗಳ ಮನೆಯ ಆವರಣದಲ್ಲಿ ಕನಿಷ್ಠ ಐದು ದೀಪಗಳನ್ನು ಬೆಳಗಿಸಬೇಕು.

ದೀಪಾವಳಿ ಸಂದರ್ಭದಲ್ಲಿ ನಗರದ 11 ಸಾವಿರ ಬಡ ಕುಟುಂಬಗಳಿಗೆ ಐದು ಪಣತೆ ಒಳಗೊಂಡಂತೆ, ರೂ.2 ಸಾವಿರ ಮೊತ್ತದ ಬಟ್ಟೆ ಮತ್ತು ದವಸ ಧಾನ್ಯ, ಪಣತೆ ಒಳಗೊಂಡ ಕಿಟ್ ನೀಡಲಾಗಿತ್ತು. ಅದನ್ನು ಸದ್ಬಳಕೆ ಮಾಡಿಕೊಂಡು, ದೀಪಾವಳಿ ದಿನ ನಗರದ ಪ್ರತಿಯೊಂದು ಹಿಂದೂಗಳ ಮನೆಯಲ್ಲಿ ದೀಪಗಳು ಪ್ರಜ್ವಲಿಸಿದಂತೆ, ಜ.22 ರ ರಾತ್ರಿ ರಾಮ ಮಂದಿರ ಉದ್ಘಾಟನೆ ದಿನವೂ ಕೂಡ ನಗರದ ಎಲ್ಲರ ಮನೆಯ ಆವರಣದಲ್ಲಿ ಕನಿಷ್ಠ 5 ದೀಪಗಳನ್ನು ಬೆಳಗಿಸಬೇಕು. ಅಲ್ಲದೆ, ನಗರದ ಎಲ್ಲ ದೇವಸ್ಥಾನಗಳಲ್ಲಿ ಹೋಮ, ಹವನ, ವಿಶೇಷ ಪೂಜೆ ಹಮ್ಮಿಕೊಳ್ಳುವ ಮೂಲಕ ಈ ಕಾರ್ಯಕ್ರಮ ಅವಿಸ್ಮರಣೀಯ ಗೊಳಿಸಬೇಕು ಎಂದು ತಿಳಿಸಿದ್ದಾರೆ.



# ಡಿಎಸ್ಸೆಸ್ ರಾಜ್ಯ ಮಟ್ಟದ ಪದಾಧಿಕಾರಿಗಳ ಅಧ್ಯಯನ ಶಿಬಿರದಲ್ಲಿ ಹೆಣ್ಣೂರ ಶ್ರೀನಿವಾಸ ಅಭಿಮತ

# ಒಳಮೀಸಲಾತಿ ಜಾರಿ ನಮ್ಮ ಹಲವು ದಶಕಗಳ ಬೇಡಿಕೆ

ಉದಯರಶ್ಮಿ ನ್ಯೂಸ್



ಆಲಮಟ್ಟಿ: ಒಳಮೀಸಲಾತಿ ಜಾರಿ ಮಾಡುವುದು ಕೇಂದ್ರದ ಕರ್ತವ್ಯ, ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಿದ್ದನ್ನು ತಪ್ಪು ಎನ್ನುತ್ತಿರುವ ಮಾಜಿ ಸಚಿವ ಗೋವಿಂದ ಕಾರಜೋಳ ಅವರ ಹೇಳಿಕೆ ದಲಿತರನ್ನು ತಪ್ಪು ದಾರಿಗೆ ಎಳೆಯುತ್ತಿದೆ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಚಾಲಕ ಹೆಣ್ಣೂರ ಶ್ರೀನಿವಾಸ ಹೇಳಿದರು.

ಇಲ್ಲಿಯ ಕರ್ನಾಟಕ ಗಾಂದಿ ಮಂಜಪ್ಪ ಹರ್ಡೇಕರ ಸ್ಮಾರಕದಲ್ಲಿ ಶನಿವಾರ ನಡೆದ ಎರಡು ದಿನದ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ರಾಜ್ಯ ಮಟ್ಟದ ಪದಾಧಿಕಾರಿಗಳ ಅಧ್ಯಯನ ಶಿಬಿರದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಕೇಂದ್ರ ಸರ್ಕಾರವೇ ಸಂವಿಧಾನದ 341(3) ಕ್ಕೆ ತಿದ್ದುಪಡಿ ತಂದು ಒಳಮೀಸಲಾತಿ ಜಾರಿಗೆ ತಂದರೆ ಅದಕ್ಕೆ ಕಾನೂನು ಮಾನ್ಯತೆ ಸಿಗುತ್ತದೆ, ಇದು ನಮ್ಮ ಹಲವು ದಶಕಗಳ ಬೇಡಿಕೆ ಎಂದರು. ಯಾವುದೇ ಅರ್ಜಿಯನ್ನು ಹಾಕದೇ ಕೇಂದ್ರ ಸರ್ಕಾರ ಶೇ 10 ರಷ್ಟು ಇಡಬ್ಲುಎಸ್ ಮೀಸಲಾತಿ ಜಾ–ರಿಗೆ ತಂದಿತು. ಒಳಮೀಸಲಾತಿಗಾಗಿ ನಿರಂತರ ಹೋರಾಟ ನಡೆಸಿದರೂ ಅದಕ್ಕೆ ಸ್ಪಂದಿಸುತ್ತಿಲ್ಲ ಎಂದು ಆಪಾದಿಸಿದರು. ಒಳಮೀಸಲಾತಿ ಜಾರಿಗಾಗಿ ರಾಜ್ಯ ಸರ್ಕಾರ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು ಸರಿಯಾಗಿದೆ, ಕೇಂದ್ರವೇ ಇದನ್ನು ಅನುಷ್ಠನಕ್ಕೆ ತರಬೇಕು ಎಂದರು.

"ಮಾದಿಗ ಮುನ್ನಡೆ", ಭೀಮ ಮುನ್ನಡೆ ಕಾರ್ಯಕ್ರಮ ಸಂಘಟಿಸಿ, ಮಾದಿಗ–ಚಲವಾದಿ ಅವರಲ್ಲಿಯೇ ಜಗಳ ಹಚ್ಚುವ ಕಾರ್ಯ ಆರ್ ಎಸ್ ಎಸ್ ಬೆಂಬಲದಿಂದ ಬಿಜೆಪಿಯವರು ನಡೆಸುತ್ತಿದ್ದಾರೆ ಎಂದು ಆರೋಪಿಸಿದರು. ಜಾತಿಗಳಲ್ಲಿಯೇ ವೈಷಮ್ಯ ಬೆಳೆಸುತ್ತಿದ್ದಾರೆ ಎಂದರು.

ವಿಧಾನಪರಿಷತ್ ಸದಸ್ಯ ಎಚ್.ಪಿ. ಸುಧಾಮದಾಸ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಅಯೋಧ್ಯೆ ವಿಷಯವನ್ನಿಟ್ಟುಕೊಂಡು ರಾಮರಾಜ್ಯ ಸೃಷ್ಟಿಸಲಾಗಿದೆ ಎನ್ನುವ ಭ್ರಮೆಯನ್ನು ಬಿಜೆಪಿ ಹಾಗೂ ಸಂಘಪ–ರಿವಾರದವರು ಹುಟ್ಟುಹಾಕಿದ್ದಾರೆ, ಈ ಬಗ್ಗೆ ಯುವಕರು, ಪ್ರಜ್ಞಾವಂತರು ಜಾಗೃತರಾಗಬೇಕು ಎಂದರು.

ದಲಿತ ಸಂಘರ್ಷ ಸಮಿತಿಯ ಚಳುವಳಿ ಹಾಗೂ ಅಂಬೇಡ್ಕರ ಅವರ ಹೋರಾಟದ ಕಾರಣದಿಂದ ಅಸಮ ಸಮಾಜದ ವ್ಯವಸ್ಥೆಯಲ್ಲಿ ದಲಿತರೂ ಸಮಾನತೆ, ಸ್ವಾಭಿಮಾನದಿಂದ ಬಾಳಲು ಸಾಧ್ಯವಾಗಿದೆ ಎಂದರು. ಮನುವಾದಿಗಳ ಕಪಿಮುಷ್ಠಿಯಲ್ಲಿ ಈ ಹಿಂದೆ ನಲುಗಿದ ನಮ್ಮ ಹಿರಿಯ ಜೀವಿಗಳೆಷ್ಟು, ಅವರು ಪಟ್ಟ ಕಷ್ಟಗಳೆಷ್ಟೋ? ಎಂಬುದನ್ನು ಈಗಿನ ಯುವಕರು ತಿಳಿದುಕೊಳ್ಳಬೇಕು, ಪ್ರಜ್ಞಾವಂತಿಕೆ ಮನೋಭಾವನೆ ಬೆಳೆಸಿಕೊಳ್ಳಬೇಕು ಎಂದರು.

ಸಿಂದಗಿಯ ಸಂಗಪಾಲ ಬಂತೇಜಿ ಸಾನ್ನಿಧ್ಯ ವಹಿಸಿ ಮಾತನಾಡಿ, 1935 ರಲ್ಲಿಯೇ ಅಂಬೇಡ್ಕರ ಅವರು ಹಿಂದೂ ಆಗಿ ಹುಟ್ಟಿದರೂ ಹಿಂದು ಆಗಿ ಸಾಯಲು ಬಯಸುವುದಿಲ್ಲ ಎಂದು ಘೋಷಿಸಿದ್ದರು. 21 ವರ್ಷಗಳ ಕಾಲ ಈ ಬಗ್ಗೆ ಯೋಚಿಸಿ 1956 ರಲ್ಲಿ ತಮ್ಮ ಲಕ್ಷಾಂತರ ಜನರ ಬೆಂಬಲದೊಂದಿಗೆ ಬುದ್ಧ ಧರ್ಮಕ್ಕೆ ಮತಾಂತರ ಹೊಂದಿದರು, ಎಲ್ಲರನ್ನು ಪ್ರೀತಿ, ಸಮಾನತೆಯಿಂದ ಕಾಣುವುದೇ ಬೌದ್ಧಧರ್ಮದ ಮೂಲ ತತ್ವವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ರಾಜ್ಯ ಸಂಘಟನಾ ಸಂಚಾಲಕರಾದ ವಿಜಯನರಸಿಂಹ, ಸೂಲಿಕುಂಟೆ ರಮೇಶ, ಎಸ್. ವಿಘ್ನೇಶ್, ಸತ್ಯಭದ್ರಾವತಿ, ಸಾಮಾಜಿಕ ನ್ಯಾಯಕ್ಕಾಗಿ ಪರಿಶಿಷ್ಟ ಜಾತಿಗಳ ಒಕ್ಕೂಟದ ಪ್ರಧಾನ ಸಂಚಾಲಕ ಬಸವರಾಜ ಕೌತಾಳ್, ಅಂಬಣ್ಣ ಅರೋಳಿಕರ್, ದಲಿತ ನೌಕರರ ಒಕ್ಕೂಟದ ರಾಜ್ಯಾಧ್ಯಕ್ಷ ಜೆ. ಶ್ರೀನಿವಾಸಲು, ದಲಿತಾ ಮಹಿಳಾ ಒಕ್ಕೂಟದ ರಾಜ್ಯ ಸಂಚಾಲಕಿ ರೇಣುಕಾ ಮಾದರ, ಪ್ರೊ ಸಿ.ಕೆ. ಮಹೇಶ್, ಭೀಮಸೇನ ಶ್ರೀನಿವಾಸ, ಜಿಲ್ಲಾ ಸಂಚಾಲಕ ಅಶೋಕ ಚಲವಾಧಿ, ಲಕ್ಕಪ್ಪ ಬಡಿಗೇರ, ಮಲ್ಲೇಶಿ ಸಜ್ಜನ, ವಿನಾಯಕ ಗುಣಸಾಗರ, ಗಣೇಶ ಮೇತ್ರಿ, ಫಕೀರಪ್ಪ ಮಾದರ, ಪರಶುರಾಮ ದಿಂಡವಾರ, ಪ್ರಕಾಶ ಗುಡಿಮನಿ, ರಾಜೀವ ತೊರವಿ, ಲಕ್ಷ್ಮಣ ಹಾಲಿಹಾಳ, ರವಿ ಮ್ಯಾಗೇರಿ, ಶರಣು ಶಿಂಧೆ ಇನ್ನಿತರರು ಇದ್ದರು.

# ಜ.21 ರಂದು ಅನ್ನ ಸಂತರ್ಪಣೆ

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಜ.21 ರಂದು ಬೆಳಿಗ್ಗೆ 11 ಗಂಟೆಗೆ ವಿಶ್ವ ದಾಸೋಹ ದಿನಾಚರಣೆ ಪ್ರಯುಕ್ತ, ಶ್ರೀ ಕುಮಾರೇಶ್ವರ ಜೀವನ ವಿಕಾಸ ಫೌಂಡೇಶನ್ ಮತ್ತು ವೀರಶೈವ ಲಿಂಗಾಯತ ಸಮಾಜದ ವತಿಯಿಂದ, ತ್ರಿವಿಧ ದಾಸೋಹಿ ಶತಾಯುಷಿ ಶ್ರೀ ಡಾ.ಶಿವಕುಮಾರ ಮಹಾಸ್ವಾಮಿಗಳು ಸಿದ್ದಗಂಗಾ ಮಠ ತುಮಕೂರು, ಮತ್ತು ಜ್ಞಾನಯೋಗಿ ಶ್ರೀ ಸಿದ್ದೇಶ್ವರ ಮಹಾಸ್ವಾಮಿಗಳು ವಿಜಯಪುರ ಇವರ ಸ್ಮರಣೋತ್ಸವ ಹಾಗೂ ಲಿಂಗೈಕ್ಯ ಚನ್ನಣ್ಣ ದೇಸಾಯಿ ಅವರ ಸ್ಮರಣಾರ್ಥವಾಗಿ ಪಟ್ಟಣದ ತಹಶಿಲ್ದಾರರ ಕಚೇರಿಯ ಹತ್ತಿರದ ಹೆಮರೆಡ್ಡಿ ಮಲ್ಲಮ್ಮ ವೃತ್ತದ ಬಳಿ ಇರುವ ಗಾರ್ಡನ್ ಜಾಗೆಯಲ್ಲಿ ಅನ್ನ ಸಂತರ್ಪಣೆ ಕಾರ್ಯಕ್ರಮ ಮತ್ತು ಜಿಲ್ಲಾ ಪಂಚಾಯತ ಮಾಜಿ ಉಪಾಧ್ಯಕ್ಷ ಪ್ರಭುಗೌಡ ದೇಸಾಯಿ ಮತ್ತು ಭಾಜಪಾ ಜಿಲ್ಲಾಧ್ಯಕ್ಷ ಆರ್. ಎಸ್.ಪಾಟೀಲ ಕೂಚಬಾಳ ಅವರ ಅಭಿಮಾನಿ ಬಳಗದಿಂದ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಬಳಗದ ಪ್ರಮುಖರಾದ ದೇವೇಂದ್ರ ವಾಲಿಕಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆಂಭಾವಿಯಲ್ಲಿ 'ಪುನಃಚೇತನ ಮೇಳ'



ಉದಯರಶ್ಮಿ ನ್ಯೂಸ್

ಕೆಂಭಾವಿ: ಎರಡು ದಿನಗಳ ಕಾಲ "ದಿ ಅಸೋಸಿಯೇಷನ್ ಆಫ್ ಪೀಪಲ್ ವಿಥ್ ಡೀಸೆಬಿಲಿಟಿ "(ಎ ಪಿ ಡಿ ) ಸಂಸ್ಥೆ ಮತ್ತು ಆರೋಗ್ಯ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ " ಪುನಃಚೇತನ ಮೇಳ" ವನ್ನು ಹಮ್ಮಿಕೊಳ್ಳಗಿತ್ತು.

ವಿಕಲಚೇತನ ಮಕ್ಕಳಿಗೆ ಮತ್ತು ವಿಕಲಚೇತನ ವ್ಯಕ್ತಿಗಳಿಗೆ ಆರೋಗ್ಯ ತಪಾಸಣೆಯನ್ನು ಕೆಂಭಾವಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಈ ಮೇಳದಲ್ಲಿ ಆರೋಗ್ಯ ತಪಾಸಣೆಯನ್ನು ವೈದ್ಯಾಧಿಕಾರಿ ಡಾ.ಗಿರೀಶ ಕುಲಕರ್ಣಿ ಮಾಡಿದರು.

ಕು. ಸ್ವಾತಿಕಾ ಬಿ ಆರ್ ಅವರು ವಿಕಲಚೇತನ ಮಕ್ಕಳಿಗೆ ವ್ಯಾಯಾಮ ಕಲಿಸಿಕೊಟ್ಟರು. ಇದೆ ಸಂದರ್ಭದಲ್ಲಿ ಮಹೇಶ್ ಎಂಬ ಮಗುವಿಗೆ ಎ ಪಿ ಡಿ .ಸಂಸ್ಥೆಯಿಂದ ಗಾಲಿ ಕುರ್ಚಿಯನ್ನು ವಿತರಿಸಲಾಯಿತು.

ಸುರಪುರ ತಾಲೂಕು ಸಂಯೋಜಕ ಸುನಿಲ್ ಹಲ್ಯಾಳ ಉಪಸ್ಥಿತರಿದ್ದರು.

ಕಾರ್ಯಕ್ರಮದ ನಿರೂಪಣೆಯನ್ನು ಶ್ರೀ ಮಾಂತೇಶ್ ಕುಂಬಾರ, ಸ್ವಾಗತವನ್ನು ಶ್ರೀಮತಿ ಲಕ್ಷ್ಮೀ ರಾಮಣ್ಣ ಹಾಲರ್, ಸಹಾಯಕರಾದ ಶ್ರೀಮತಿ ಮೀನಾಕ್ಷಿ, ಶ್ರೀ ಬಸವರಾಜ್ ಬೇವಿನಾಳ ವಂದನಾರ್ಪಣೆ ಮಾಡಿದರು.

ಶಿಬಿರದಲ್ಲಿ ಇಂಜೆಕ್ಷನ್,ಮಾತ್ರೆ , ಪೌಷ್ಟಿಕ ಆಹಾರವನ್ನು ಉಚಿತವಾಗಿ ವಿತರಣೆ ಮಾಡಲಾಯಿತು.

ಒಟ್ಟು 70 ಜನ ಶಿಬಿರದಲ್ಲಿ ಪಾಲ್ಗೊಂಡಿದ್ದರು. 41 ಮಕ್ಕಳು ಆರೋಗ್ಯ ತಪಾಸಣೆಯ ಸದುಪಯೋಗ ಪಡೆದುಕೊಂಡರು.

# ಕೊಲ್ಹಾರ: ನೂತನ ಅಧ್ಯಕ್ಷರಾಗಿ ಅತ್ತಾರ

ಉದಯರಶ್ಮಿ ನ್ಯೂಸ್



ಕೊಲ್ಹಾರ: ಪಟ್ಟಣದ ಅಮಾನತ್ ಮೈನಾರಿಟೀಸ್ ಕೊ.ಆಪ್ ಕ್ರೆಡಿಟ್ ಸೊಸೈಟಿಯ ನೂತನ ಅಧ್ಯಕ್ಷರಾಗಿ ಮಹಮ್ಮದಸಲೀಂ ಅಬ್ದುಲ್ ರೆಹಮಾನ ಅತ್ತಾರ ಅವರನ್ನು ಅವಿರೋಧವಾಗಿ ಸರ್ವ ಸದಸ್ಯರು ಆಯ್ಕೆ ಮಾಡಿದರು.

ಈ ಮೊದಲು ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿದ್ದ ಅಲ್ಲಾಭಕ್ಷ ವಿಜಾಪೂರ ಅವರ ವಿರುದ್ದ ಅವಿಶ್ವಾಸ ಮಂಡಣೆ ಮಾಡಿದ್ದರ ಪ್ರಯುಕ್ತ ಅಧ್ಯಕ್ಷ ಸ್ಥಾನಕ್ಕೆ ಮಾತ್ರ ಚುನಾವಣೆ ನಡೆಯಿತು.

ಚುನಾವಣೆ ಅಧಿಕಾರಿಗಳಾಗಿ ಎಸ.ಎಸ್.ಹಂಗರಗಿ ಕಾರ್ಯ ನಿರ್ವಹಿಸಿದರು. ಅದರಂತೆ ರಶೀದ ಬಿಕ್ಕನಸಾಬ್ ಬೇಪಾರಿ ಅವರನ್ನು ಉಪಾಧ್ಯಕ್ಷ ಸ್ಥಾನದಲ್ಲಿ ಸರ್ವ ಸದಸ್ಯರ ಒಪ್ಪಿಗೆ ಮೇರೆಗೆ ಮುಂದುವರೆಸಲಾಯಿತು.

ಆಡಳಿತ ಮಂಡಳಿಯ ಸದಸ್ಯರಾದ ಜಾವೇದ ಬೀಳಗಿ, ಅಲ್ಲಾಭಕ್ಷ ಗಿರಗಾಂವಿ, ನೂರಹ್ಮದ ಕಂಕರಪೀರ, ಸಲೀಂ ಸಾರವಾಡ, ದಾದಾಪೀರ ಕಂಕರಪೀರ, ಶ್ರೀಮತಿ ಮಾಬೂಬಿ ಅತ್ತಾರ ಉಪಸ್ಥಿತರಿದ್ದರು. ಪಟ್ಟಣದ ಹಿರಿಯರಾದ ಕಲ್ಲು ದೇಸಾಯಿ, ಚನಮಲ್ಲಪ್ಪ ಗಿಡ್ಡಪ್ಪಗೋಳ, ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಮುಖಂಡರು ನೂತನ ಅಧ್ಯಕ್ಷರನ್ನು ಸನ್ಮಾನಿಸಿದರು.

# ಮಾನವೀಯತೆಗಾಗಿ ಕೃಷಿಗೆ ನೀರು ಬಳಸದಿರಿ :ಎಸಿ ಗದ್ಯಾಳ



ಉದಯರಶ್ಮಿ ನ್ಯೂಸ್

ಇಂಡಿ: ಇಂಡಿ, ಚಡಚಣ ತಾಲೂಕಿನ ಭೀಮಾ ನದಿಯ ದಂಡೆಯ ರೈತರು ಭೀಕರ ಬರಗಾಲದ ನಿಮಿತ್ಯ ಬರುವ ದಿನಗಳಲ್ಲಿ ಗ್ರಾಮಸ್ಥ–ರಿಗೆ ಮತ್ತು ಜನ ಜಾನುವಾರುಗಳಿಗೆ ತೊಂದರೆ ಯಾಗದಂತೆ ಮಾನವೀಯ ಆಧಾರದ ಮೇಲೆ ಕೃಷಿಗೆ ನೀರು ಬಳಸಬಾರದೆಂದು ಕಂದಾಯ ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ್ ಮನವಿ ಮಾಡಿದ್ದಾರೆ.

ಅವರು ಶುಕ್ರವಾರ ಇಂಡಿ ಮತ್ತು ಚಡಚಣ ತಾಲೂಕಿನ ಅಣಚಿ, ಧೂಳಖೇಡ, ಮರಗೂರ ಗ್ರಾಮಗಳಿಗೆ ಭೇಟಿ ನೀಡಿದ್ದ ಸಂದರ್ಭದಲ್ಲಿ ರೈತರಿಗೆ ಮನವಿ ಮಾಡಿದರು.

ಇಂಡಿ ಮತ್ತು ಚಡಚಣ ತಾಲೂಕಿನಲ್ಲಿ ಮಳೆ ಕಡಿಮೆಯಾಗಿರುವದರಿಂದ ಭೀಮಾ ನದಿಯಲ್ಲಿ ನೀರಿನ ಪ್ರವಾಹ ಕಡಿಮೆಯಾಗಿದೆ. ಹೀಗಾಗಿ ರೈತರು ಕೃಷಿಗೆ ನೀರು ಬಳಸಬಾರದು, ಅದಲ್ಲದೆ ಇಂಡಿ ಮತ್ತು ಚಡಚಣ ತಾಲೂಕಿನ ಬಹುಹಳ್ಳಿ ಕುಡಿಯುವ ನೀರು ಸರಬರಾಜು ಯೋಜನೆಗಳಿಗೆ ನೀರಿನ ಅವಶ್ಯಕತೆ ಇರುವದ–ರಿಂದ ಇಂಡಿ ಮತ್ತು ಚಡಚಣ ತಾಲೂಕುಗಳ ಭೀಮಾ ನದಿಯ ದಡದಲ್ಲಿರುವ ಗ್ರಾಮಗಳ ರೈತರು ನೀರನ್ನು ಬಳಸದಂತೆ ಕಾನೂನಾತ್ಮಕ ನಿರ್ಬಂಧ ವಿಧಿಸಿದ್ದು ಮಾನವೀಯ ಆಧಾರದ ಮೇಲೆ ನೀರು ಬಳಸದಂತೆ 144ರನ್ವಯ ಆದೇಶ ಹೊರಡಿಸಿದೆ ಎಂದರು.

ಇಂಡಿಯ ತಹಸೀಲ್ದಾರ ಬಿ.ಎಸ್. ಕಡಕಬಾವಿ, ಚಡಚಣ ತಹಸೀಲ್ದಾರ ಸಂಜಯ ಇಂಗಳೆ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ ಅಧಿಕಾರಿ ಎಸ.ಆರ್. ರುದ್ರವಾಡಿ, ಹೆಸ್ಕಾಂ ಎಇಇ ಎಸ್. ಆರ್.ಮೆಂಡೆಗಾರ, ಚಡಚಣ ಎಇಇ ಕುಮಸಿ, ಇಒ ಬಾಬು ರಾಠೋಡ, ಚಡಚಣ ಇಒ ಸಂಜಯ ಖಡಗೇಕರ ಮತ್ತಿತರಿದ್ದರು.

# ಮಹಿಳೆ ಮೇಲೆ ದೌರ್ಜನ್ಯ: ಆರೋಪಿಗಳನ್ನು ಬಂಧಿಸಲು ಆಗ್ರಹ



ಉದಯರಶ್ಮಿ ನ್ಯೂಸ್

ವಿಜಯಪುರ: ಅಖಿಲ ಭಾರತ ವಾಲ್ಮೀಕಿ ಸೇವಾ ಸಂಘದ ವತಿಯಿಂದ ಕೊಲ್ಹಾರ ಜಿಲ್ಲೆಯ ವೆಮಕಲ್ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಬರುವ ಮೇಡಿಹಾಳ್ ಗ್ರಾಮದ ವಾಲ್ಮೀಕಿ ಸಮಾಜದ ನೀಲಮ್ಮ ಎಂಬ ಮಹಿಳೆಯ ಮೇಲೆ ದೌರ್ಜನ್ಯ ಎಸಗಿ ಚಿತ್ರ ಹಿಂಸೆ ಹಲ್ಲೆ ಮಾಡಿದ ಆರೋಪಿಗಳನ್ನು ಬಂಧಿಸಲು ಅಪರ ಜಿಲ್ಲಾಧಿಕಾರಿ ಮಹಾದೇವ ಮುರುಗಿ ಮುಖಾಂತರ ಶನಿವಾರ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ ಬಟಗಿ ಮಾತನಾಡಿ, ಕೋಲ್ಹಾರ್ ಜಿಲ್ಲೆಯ ವೇಮಗಲ್ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಬರುವ ಮಡಿಹಾಳ ಗ್ರಾಮದ ವಾಲ್ಮೀಕಿ ಸಮಾಜದ ನೀಲಮ್ಮ ಎಂಬ ದಲಿತ ಮಹಿಳೆಯು ಮದುವೆ ಮತ್ತಿತರ ಕಾರ್ಯಕ್ರಮಗಳಲ್ಲಿ ಎಲೆ ಎತ್ತುವ ಕೆಲಸ ಮಾಡುತ್ತಾ ಬಿಡುವಿನ ವೇಳೆಯಲ್ಲಿ ಮನೆಗೆಲಸ ಮಾಡಿಕೊಂಡು ಜೀವನ ನಡೆಸುತ್ತಿದ್ದರು. ಅದೇ ಗ್ರಾಮದ ಸವರ್ಣೀಯ ಸಮುದಾಯದ ಪ್ರಕಾಶ ಮತ್ತು ಮಮತಾ ದಂಪತಿಗಳು ನೀಲಮ್ಮನನ್ನು ಮನೆಗೆಲಸಕ್ಕೆ ಕರೆದಿದ್ದಾರೆ. ಅವಳು ಅನಾರೋಗ್ಯ ಕಾರಣ ಕೆಲಸಕ್ಕೆ ಹೋಗಿಲ್ಲ. ಇದನ್ನೇ ನೆಪ ಮಾಡಿಕೊಂಡು ದಂಪತಿಗಳು ಇಬ್ಬರು ಸೇರಿ ನೀಲಮ್ಮನ ಮನೆಗೆ ನುಗ್ಗಿ ಮನಸೋ ಇಚ್ಚೆ ಹಲ್ಲೆ ಮಾಡಿ ಜಾತಿ ನಿಂದನೆ ಮಾಡಿರುವುದು ಅಮಾನವೀಯಯ, ಖಂಡನೀಯ.

ಇಂಥ ಹೇಯಕೃತ್ಯ ಮಾಡಿದ ಆರೋಪಿಗಳನ್ನು ಬಂಧಿಸದೆ ಇರುವುದು ನಾಚಿಗೇಡಿನ ಸಂಗತಿ ಎಂದರು.

ತಕ್ಷಣ ದೌರ್ಜನ್ಯವೆಸಗಿದ ಆರೋಪಿಗಳನ್ನು ಬಂಧಿಸಿ ನ್ಯಾಯ ಒದಗಿಸಿಕೊಡಬೇಕು ಎಂದು ಒತ್ತಾಯಿಸಿದರು. ಒಂದು ವೇಳೆ ನ್ಯಾಯ ನೀಡದೆ ಹೋದರೆ ರಾಜ್ಯದಾದ್ಯಂತ ಉಗ್ರವಾದ ಹೋರಾಟವನ್ನು ಕೈಗೊಳ್ಳುತ್ತೇವೆ. ಮುಂದಾಗುವ ಅನಾಹುತಕ್ಕೆ ಸರಕಾರವೇ ಕಾರಣವಾಗುತ್ತದೆ. ದಯವಿಟ್ಟು ಆ ಕುಟುಂಬಕ್ಕೆ ನ್ಯಾಯ ಒದಗಿಸಿ ಪರಿಹಾರ ಕಲ್ಪಿಸಿ ಕೊಡಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಣ, ಜಿಲ್ಲಾಧ್ಯಕ್ಷ ಜಗದೇವ ಸೂರ್ಯವಂಶಿ, ಗಿರೀಶ ಕಲಘಟಗಿ, ಜಯಶ್ರೀ, ಪಲ್ಲವಿ ಹೊನಮೊರೆ ಮುಂತಾದರು ಉಪಸ್ಥಿತ–ರಿದ್ದರು.

# ಆರೋಗ್ಯವಾಗಿದ್ದರೆ ಮಾತ್ರ ಏನನ್ನೂ ಸಾಧಿಸಲು ಸಾಧ್ಯ :ಹೂಗಾರ




ಉದಯರಶ್ಮಿ ನ್ಯೂಸ್

ಇಂಡಿ: ಪ್ರತಿಯೊಬ್ಬ ವಿಕಲಚೇತನರು ತಪ್ಪದೇ ತಪಾಸಣೆ ಮಾಡಿಸಿಕೊಂಡು ಉಚಿತ ಆರೋಗ್ಯ ತಪಾಸಣೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಗ್ರಾಪಂ ಅಭಿವೃದ್ಧಿ ಅಧಿಕಾರಿ ಉಮೇಶ ಹೂಗಾರ ಹೇಳಿದರು.

ಗುರುವಾರ ತಾಲೂಕಿನ ಆಳೂರ ಗ್ರಾಮದ ಗ್ರಾಮ ಪಂಚಾಯತ್ ಆವರಣದಲ್ಲಿ ಹಮ್ಮಿಕೊಂಡಿದ್ದ ವಿಕಲಚೇತನರ ಸಂಘಟನೆಯಿಂದ 25 ರಿಂದ 70 ವರ್ಷದ ಒಳಗಿನ ವಿಕಲಚೇತನರಿಗೆ ಉಚಿತ ಆರೋಗ್ಯ ತಪಾಸಣೆ ಶಿಬಿರದಲ್ಲಿ ಅವರು ಮಾತನಾಡಿದರು.

ಒತ್ತಡದ ಜೀವನದಲ್ಲಿ ಆರೋಗ್ಯದ ಕಾಳಜಿ ವಹಿಸದೇ ಇರುವುದ–ರಿಂದ ಅನೇಕ ರೋಗಗಳಿಗೆ ತುತ್ತಾಗುವಂತಾಗಿದೆ. ಕಾರಣ ಪ್ರತಿಯೊಬ್ಬರೂ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು. ನಾವು ಆರೋಗ್ಯವಾಗಿದ್ದರೆ ಮಾತ್ರ ಏನನ್ನಾದರೂ ಸಾಧಿಸಲು ಸಾಧ್ಯ. ಇಂತಹ ತಪಾಸಣೆ ಶಿಬಿರಗಳ ಸದುಪಯೋಗ ಪಡೆದುಕೋಬೇಕು ಎಂದರು.

ಈ ಸಂದರ್ಭದಲ್ಲಿ ವಿ.ಆರ್. ಡಬ್ಲ್ಯೂ ಭೀಮಾಶಂಕರ ಗುಡ್ಡೇವಾಡಿ, ಪತ್ರಕರ್ತ ಯಲಗೊಂಡ ಬೇವನೂರ, ಚಂದ್ರಕಾಂತ ದೌಲಿ, ತಾಲೂಕಾ ಕೆ.ಎಚ್.ಪಿ.ಟಿ.ಸಂಯೋಜಕ ಶಿವಾನಂದ ಸಿಂಗೆ, ಗ್ರಾಪಂ ಸದಸ್ಯರು, ಗ್ರಾಪಂ ಕಾರ್ಯದರ್ಶಿ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಸೇರಿದಂತೆ ವಿಕಲಚೇತನರು ಭಾಗವಹಿಸಿದ್ದರು.

# ಕಾಲುವೆಗೆ ನೀರು ಹರಿಸಲು ಆಗ್ರಹಿಸಿ ಜ.23ಕ್ಕೆ ಹೆದ್ದಾರಿ ಬಂದ್‌ಗೆ ಕರೆ

ಉದಯರಶ್ಮಿ ನ್ಯೂಸ್

ಕೋಲಾರ: ಬರಗಾಲದಿಂದ ತತ್ತರಿಸಿ ಕಂಗಾಲಾಗಿರುವ ರೈತ–ರಿಗೆ ಕಾಲುವೆಯ ನೀರು ಇಲ್ಲದೇ, ಒಣಗುತ್ತಿವೆ ಇರುವ ಅಲ್ಪಸ್ವಲ್ಪ ಬೆಳೆಗಳಿಗೆ ನೀರಿನ ಅವಶ್ಯಕತೆ ಇದೆ, ಕೂಡಲೇ ಕೋಲಾರ, ನಿಡಗುಂದಿ, ತಾಲೂಕಿನಲ್ಲಿರುವ ಮುಳವಾಡ ಏತನೀರಾವರಿಯ ಕಾಲುವೆಗಳಿಗೆ ನೀರು ಹರಿಸಬೇಕು ಎಂದು ಆಗ್ರಹಿಸಿ ನಾಳೆ ಮಂಗಳವಾರದಂದು ರೈತರೊಂದಿಗೆ ಕೋಲಾರದ ರಾಷ್ಟ್ರೀಯ ಹೆದ್ದಾರಿ ಬಂದ್ ಮಾಡುವ ಮೂಲಕ ಹೋರಾಟ ಮಾಡಲಾಗುವುದು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕೋಲಾರ ತಾಲೂಕಾ ಅಧ್ಯಕ್ಷ ಸೋಮು ಬಿರಾದಾರ ತಿಳಿಸಿದ್ದಾರೆ.

ನಾರಾಯಣಪುರ ಆಣೆಕಟ್ಟಿನ ಎಡ ಹಾಗೂ ಬಲದಂಡೆಯ ಕಾಲುವೆಗಳಿಗೆ ನೀರು ಹರಿಸುತ್ತಿರುವುದು ಖುಷಿಯ ವಿಚಾರ, ಅದರಂತೆ ನಮ್ಮ ಬೆಳೆಗಳು ಉಳಿಯಬೇಕು ಜಾನುವಾರುಗಳಿಗೆ ಕುಡಿಯಲು ನೀರು ಬೇಕೆ ಬೇಕು ಆದ್ದರಿಂದ ಜನೇವರಿ 22 ರ ಒಳಗೆ ಕಾಲುವೆಗೆ ನೀರು ಹರಿಸುವಂತೆ ಆಗ್ರಹಿಸಿದರು.

ಮಳೆಯ ಅಭಾವದಿಂದ ಇರುವ ಭಾವಿ, ಭೋರವೆಲ್‌ಗಳಲ್ಲಿ ನೀರಿಲ್ಲದೇ ಜಮೀನಿನಲ್ಲಿ ಇರುವ ಗೋಧಿ, ಕಡ್ಲಿ, ಶೇಂಗಾ, ಸೂರ್ಯಕಾಂತಿ, ಮೇಣಸಿನಕಾಯಿ, ಸೇರಿದಂತೆ ವಿವಿಧ ಬೆಳೆಗಳು ಒಣಗುತ್ತಿವೆ, ರೈತ ಉಳಿಯಬೇಕಾದರೆ ಕಾಲುವೆಗೆ ನೀರು ಹರಿಸಬೇಕು ಇಲ್ಲವಾದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಉಗ್ರವಾದ ಹೋರಾಟ ಮಾಡಲಾಗುವುದು ಎಂದು ಅವರು ಆಗ್ರಹಿಸಿದರು.

# ಜ.22 ರಂದು ಮನೆಮನೆಗಳಲ್ಲಿ ದೀಪ ಬೆಳಗಿಸಿ :ವಿಜುಗೌಡ



ಉದಯರಶ್ಮಿ ನ್ಯೂಸ್

ದೇವರಹಿಪ್ಪರಗಿ: ದೇಶದಾದ್ಯಂತ ಮಂತ್ರಾಕ್ಷತೆ ವಿತರಣೆ ಶಾಂತಿಯುತವಾಗಿ ಜರುಗುತ್ತಿದೆ. ಯಾವುದೇ ಕಾರಣಕ್ಕೂ ಮಂತ್ರಾಕ್ಷತೆ ವಿತರಣೆ ಅಯೋಧ್ಯೆ ರಾಮಮಂದಿರ ಉದ್ಘಾಟನೆಯ ಸುಸಂದರ್ಭಕ್ಕೆ ಕಪ್ಪುಚುಕ್ಕೆ ಆಗಬಾರದು. ಆ ನಿಟ್ಟಿನಲ್ಲಿ ನಾವೆಲ್ಲ ಶಾಂತಿಯುತವಾಗಿ ಇರೋಣ ಎಂದು ಬಿಜೆಪಿ ಜಿಲ್ಲಾ ಧುರೀಣ ವಿಜುಗೌಡ ಪಾಟೀಲ ಹೇಳಿದರು.

ಪಟ್ಟಣದ ಕರಿದೇವರ ದೇವಸ್ಥಾನದಲ್ಲಿ ಜರುಗಿದ ಸಂಘ ಪರಿವಾರ, ಬಿಜೆಪಿಯ ಪ್ರಮುಖರು, ಹಾಗೂ ಕಾರ್ಯಕರ್ತರ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಕಳೆದ ದಿನಗಳಲ್ಲಿ ನಡೆದ ಕಹಿ ಘಟನೆಗಳನ್ನು ಮರೆಯೋಣ. ದಿ:22 ರಂದು ಎಲ್ಲರೂ ಮನೆಮನೆಗಳಲ್ಲಿ ದೀಪ ಬೆಳಗಿಸಿ ಮತ್ತೊಮ್ಮೆ ದೀಪಾವಳಿ ಆಚರಿಸುವುದರ ಮೂಲಕ ಪ್ರಧಾನಿ ನರೇಂದ್ರ ಮೋದಿಯವರ ಕೈ ಬಲಪಡಿಸೋಣ ಎಂದರು.

ನಿವೃತ್ತ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಸಿ.ಕೆ.ಕುದರಿ ಮಾತನಾಡಿ, ಪಟ್ಟಣದ ಶಾಂತಿ ಕದಡುವ ಕಾರ್ಯಗಳಿಗೆ ಆಸ್ಪದ ನೀಡದಂತೆ ನಾವೆಲ್ಲ ಪ್ರಬುದ್ಧರಾಗಿ ವರ್ತಿಸೋಣ ಎಂದರು.

ಮನೆಮನೆಗೆ ಮಂತ್ರಾಕ್ಷತೆ ವಿತರಿಸುವ ಸಮಯದಲ್ಲಿ ಪಟ್ಟಣದ 8ನೇ ವಾರ್ಡಿನಲ್ಲಿ ಘೋಷಣೆಗೆ ಸಂಬಂಧಿಸಿದಂತೆ ಸಂಘದ ಕಾರ್ಯಕರ್ತರು ಹಾಗೂ ಒಂದು ಸಮುದಾಯದ ನಡುವೆ ಕೈ–ಕೈ ಮಿಲಾಯಿಸಿ ವಿವಾದ ಉಂಟಾಗಿತ್ತು. ವಿವಾದವನ್ನು ಬಗೆಹರಿಸುವ ನಿಟ್ಟಿನಲ್ಲಿ ಸಂಘದ ಕಾರ್ಯಕರ್ತರು ಶನಿವಾರ ಪಟ್ಟಣದಲ್ಲಿ ಮಡಿವಾಳ ಮಾಚಿದೇವ ದೇವಸ್ಥಾನದಿಂದ ಕರಿದೇವರ ದೇವಾಲಯದವರೆಗೆ ಜಾಥಾ ಕೈಗೊಂಡರು. ಈ ಸಂದರ್ಭದಲ್ಲಿ ಪ್ರಮುಖರೇ ಉಳಿದ ಮನೆಗಳಿಗೆ ಮಂತ್ರಾಕ್ಷತೆ ವಿತರಿಸಿ ಸಮುದಾಯದ ಪ್ರಮುಖರೊಂದಿಗೆ ಸಭೆ ನಡೆಸಿ ವಿವಾದ ಕೊನೆಗೊಳಿಸಿದರು.

ಈ ಸಂದರ್ಭದಲ್ಲಿ ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ಬಂದೋಬಸ್ತ್ ಮಾಡಿ ಯಾವುದೇ ಅಹಿತಕರ ಘಟನೆ ಜರುಗದಂತೆ ನಿಗಾ ವಹಿಸಿತು.

ಬಿಜೆಪಿ ಜಿಲ್ಲಾ ಪ್ರಮುಖರಾದ ರಾಜು ಮಗಿಮಠ, ಪ್ರಭುಗೌಡ ಬಿರಾದಾರ(ಅಸ್ಕಿ), ಡಾ.ಬಾಬು ರಾಜೇಂದ್ರ ನಾಯಿಕ್, ಸುರೇಶಗೌಡ ಪಾಟೀಲ(ಸಾಸನೂರ), ವಿವೇಕಾನಂದ ಡಬ್ಬಿ, ಅಶೋಕ ಅಲ್ಲಾಪೂರ, ಶಿವಾನಂದ ಅವುಟಿ, ಬಸವರಾಜ ಹೂಗಾರ, ಗಾಯತ್ರಿ ದೇವೂರ, ಶಿಲ್ಪಾ ಕುದರಗೊಂಡ ಪಟ್ಟಣದ ಪ್ರಮುಖರಾದ ಬಾಬುಗೌಡ ಪಾಟೀಲ(ಜಿಡ್ಡಿಮನಿ), ಕಾಸುಗೌಡ ಬಿರಾದಾರ, ಶ್ರೀಶೈಲ ದೇಸಾಯಿ ಸಹಿತ ವಿಶ್ವ ಹಿಂದೂ ಪರಿಷತ್, ಸಂಘಪರಿವಾರ, ಬಿಜೆಪಿಯ ಪ್ರಮುಖರು, ಕಾರ್ಯಕರ್ತರು ಇದ್ದರು.

# ಸಂಸದ ಅನಂತಕುಮಾರ ವಿರುದ್ಧ ಕ್ರಮಕ್ಕೆ ಆಗ್ರಹ



ಉದಯರಶ್ಮಿ ನ್ಯೂಸ್

ಬ್ರಹ್ಮದೇವನಮಡು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಏಕವಚನದಲ್ಲಿ ನಿಂದಿಸಿದ ಉತ್ತರ ಕನ್ನಡದ ಸಂಸದ ಅನಂತಕುಮಾರ ಹೆಗಡೆ ಅವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಕಾಂಗ್ರೆಸ್ ಯುವ ಮುಖಂಡ ಚಂದ್ರು ಕೆಂಭಾವಿ ಒತ್ತಾಯಿಸಿದ್ದಾರೆ.

ಈ ಹಿಂದೆ ಕೇಂದ್ರ ಸಚಿವರಾಗಿದ್ದಾಗ ಸಂವಿಧಾನವನ್ನು ಬದಲಾಯಿಸುವ ಕುರಿತು ಮಾತನಾಡಿ ವಿವಾದಕ್ಕೆ ಕಾರಣವಾಗಿದ್ದರು. ಬಳಿಕ ನಾಲ್ಕು ವಷ9 ಸಾವ9ಜನಿಕವಾಗಿ ಯಾವ ಕಾಯ9ಕ್ರಮದಲ್ಲೂ ಪಾಲ್ಗೊಂಡಿರಲಿಲ್ಲ. ಇದೀಗ ಲೋಕಸಭೆ ಚುನಾವಣೆ ಬರುತ್ತಿದ್ದು, ಹೀಗಾಗಿ ಮತ್ತೇ ನಾಲಿಗೆ ಹರಿಬಿಟ್ಟಿದ್ದಾರೆ.ಹಿರಿಯ ನಾಯಕರ ವಿರುದ್ದ ಬಾಯಿಗೆ ಬಂದಂತೆ ಪದ ಪ್ರಯೋಗ ಮಾಡುತ್ತಿರುವದು ಸರಿಯಲ್ಲ. ಸರ್ಕಾರ ಕೂಡಲೇ ಅವರ ಮೇಲೆ ಕ್ರಮ ಕೈಗೊಳ್ಳಬೇಕು ಎಂದು ಪ್ರಕಟಣೆಯಲ್ಲಿ ಆಗ್ರಹಿಸಿದ್ದಾರೆ.

## ಸಂವಿಧಾನ ದಿನಾಚರಣೆ ಅಂಗವಾಗಿ ಸಂವಿಧಾನ ಜಾಗೃತಿ ಜಾಥಾ ಸ್ತಬ್ಧ ಚಿತ್ರ ಜಿಲ್ಲೆಯಲ್ಲೆಡೆ ಸಂಚಾರ

# ನೋಡಲ್ ಅಧಿಕಾರಿಗಳು ವ್ಯವಸ್ಥಿತವಾಗಿ ಕಾರ್ಯ ನಿರ್ವಹಿಸಿ :ಡಿಸಿ ಭೂಬಾಲನ್




ಉದಯರಶ್ಮಿ ನ್ಯೂಸ್

ವಿಜಯಪುರ: ಸಂವಿಧಾನ ದಿನಾಚರಣೆ ಅಂಗವಾಗಿ ಸಂವಿಧಾನ ಜಾಗೃತಿ ಜಾಥಾದ ಸ್ತಬ್ಧ ಚಿತ್ರಕ್ಕೆ ಜಿಲ್ಲೆಯಲ್ಲಿ ಜನವರಿ 26 ರಂದು ನಗರದ ಡಾ.ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಚಾಲನೆ ನೀಡಲಿರುವ ಸ್ತಬ್ಧಚಿತ್ರ ವಾಹನಕ್ಕೆ ಮಾರ್ಗನಕ್ಷೆ (ರೂಟ್ ಮ್ಯಾಪ್) ಸಿದ್ಧಪಡಿಸಲಾಗಿದ್ದು, ಮಾರ್ಗನಕ್ಷೆಯಂತೆ ಸ್ತಬ್ಧಚಿತ್ರ ವಾಹನ ಸಂಚರಿಸಲು ಎಲ್ಲ ಅಧಿಕಾರಿಗಳು ವ್ಯವಸ್ಥಿತವಾಗಿ ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇ–ರಿಯ ಕೆಸ್ವಾನ್ ಸಭಾಂಗಣದಲ್ಲಿ ಶನಿವಾರ ನಡೆದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಂವಿಧಾನ ಜಾಗೃತಿ ಜಾಥಾದ ಎರಡೂ ಸ್ತಬ್ಧಚಿತ್ರಗಳು ಜಿಲ್ಲೆಯಾದ್ಯಂತ 27 ದಿನಗಳ ಕಾಲ ಸಂಚರಿಸಲಿದ್ದು, ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತ್‌ಗಳು ಒಳಗೊಳ್ಳಬೇಕು. ತಾಲೂಕಾ ಕೇಂದ್ರದಲ್ಲಿ ಸ್ತಬ್ಧಚಿತ್ರ ಆಗಮಿಸುವ ಸಂದರ್ಭದಲ್ಲಿ ಎಲ್ಲ ತಹಶೀಲ್ದಾರರು, ನೋಡಲ್ ಅಧಿಕಾ–ರಿಗಳು ಸ್ಥಳದಲ್ಲಿದ್ದು, ಭವ್ಯವಾಗಿ ಸ್ವಾಗತಿಸುವಂತೆ ನೋಡಿಕೊಳ್ಳಬೇಕು ಎಂದು ಅವರು ಸೂಚನೆ ನೀಡಿದರು.

ವಿಜಯಪುರದಿಂದ ಹಾಗೂ ಇನ್ನೊಂದು ಇಂಡಿಯಿಂದ ಸ್ತಬ್ಧಚಿತ್ರ ಸಂಚರಿಸಲಿದೆ. ಜಿಲ್ಲೆಯ 13 ತಾಲೂಕಿನ 211 ಗ್ರಾಮ ಪಂಚಾಯತಿ ಹಾಗೂ ಪಟ್ಟಣ ಪಂಚಾಯತಿ ಪುರಸಭೆ ವ್ಯಾಪ್ತಿಗಳಲ್ಲಿ ಸ್ತಬ್ಧಚಿತ್ರ ಸಂಚರಿಸಲಿವೆ. ಸ್ತಬ್ಧಚಿತ್ರವಾಹನಕ್ಕೆ ಸಂಭ್ರಮದಿಂದ ಅದ್ದೂರಿಯಾಗಿ ಸ್ವಾಗತಿಸಲು ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

ವಿಜಯಪುರ ಉಪವಿಭಾಗದಿಂದ ಸಂಚರಿಸುವ ಸ್ತಬ್ಧಚಿತ್ರ ವಾಹನ ವಿಜಯಪುರ ನಗರದಿಂದ ಆರಂಭಗೊಂಡು, ಐನಾಪುರ, ಮದಭಾವಿ, ಹೊನ್ನುಟಗಿ, ಹೆಗಡಿಹಾಳ, ಕುಮಟಗಿ, ಹಡಗಲಿ, ಶಿವಣಗಿ, ಆಹೇರಿ, ಜಂಬಗಿ, ನಾಗಠಾಣ, ಅಲಿಯಾಬಾದ, ಗುಣಕಿ, ತಿಡಗುಂದಿ, ಮಖಣಾಪುರ, ಕನ್ನೂರ, ಹಿಟ್ನಳ್ಳಿ, ಜುಮನಾಳ, ತೊರವಿ, ಬರಟಗಿ, ಜಾಲಗೇರಿ, ಲೋಹಗಾಂವ, ಸಿದ್ದಾಪುರದ, ಟಕ್ಕಳಕಿ, ಘೋಣಸಗಿ, ಕನಮಡಿ, ಬಿಜ್ಜರಗಿ, ಬಾಬಾನಗರ, ಹೊನವಾಡ, ಕೊಟ್ಯಾಳ, ತಿಕೋಟಾ, ಹೊನಗನಹಳ್ಳಿ, ಕಾರಜೋಳ, ಕಾಖಂಡಕಿ, ಬಬಲೇಶ್ವರ, ನಿಡೋಣಿ, ಕುಮತೆ, ಅರ್ಜುಣಗಿ, ಹಲಗಣಿ, ಕಂಬಾಗಿ, ಬೋಳಚಿಕ್ಕಲಕಿ, ಗುಣದಾಳ, ಹೋಸೂರ, ದೇವರಗೆನ್ನೂರ, ಜೈನಾಪುರ, ಮಮದಾಪುರ, ಸಾರವಾಡ, ಮುಳವಾಡ, ತಳೇವಾಡ, ಮಸೂತಿ, ಮಲಘಾಣ, ರೋಣಿಹಾಳ, ಕೊಲ್ಹಾರ, ಹಣಮಾಪುರ, ಸಿದ್ದನಾಥ ಆರ್.ಸಿ., ಅರಷಣಗಿ, ತೆಲಗಿ, ಕೂಡಗಿ, ಮುತ್ತಗಿ, ಯರನಾಳ, ಮನಗೂಳಿ, ಉಕ್ಕಲಿ, ಡೋಣೂರ, ಮಸಬಿನಾಳ, ಬಸವನಬಾಗೇವಾಡಿ, ಇಂಗಳೇಶ್ವರ, ದಿಂಡವಾರ, ವಡವಡಗಿ, ಕೆ.ಸಾಲವಾಡಗಿ, ಬ್ಯಾಕೋಡ, ಹೂವಿನಹಿಪ್ಪರಗಿ, ಹುಣಶ್ಯಾಳ ಪಿಬಿ, ನರಸಲಗಿ, ಮಣೂರ, ಕಣಕಾಳ, ರೂಡಗಿ, ಬಸರಕೋಡ, ಢವಳಗಿ, ಮಡಿಕೇಶ್ವರ ಹಾಗೂ ಇಂಗಳಗೇರಿ ಗ್ರಾಮಗಳಲ್ಲಿ ಸಂಚರಿಸಲಿದೆ.

ಅದರಂತೆ ಇಂಡಿ ಉಪವಿಭಾಗದಿಂದ ಸಂಚ–ರಿಸಲಿರುವ ಸ್ತಬ್ಧಚಿತ್ರ ವಾಹನ ಇಂಡಿ, ಚಿಕ್ಕಬೇವನುರ, ಅಂಜುಟಗಿ, ಬಳ್ಳೊಳ್ಳಿ, ಝಳಕಿ, ಹಲಸಂಗಿ, ಧೂಳಖೇಡ, ಲೋಣಿ, ಕೆರೂರ, ಹತ್ತಳ್ಳಿ, ಉಮರಜ, ರೇವತಗಾಂವ, ನಿವರಗಿ, ಚಡಚಣ, ಬರಡೋಲ, ದೇವರನಿಂಬರಗಿ, ಜಿಗಜಿವಣಗಿ, ನಂದರಗಿ, ಇಂಚಗೇರಿ, ಕಪನಿಂಬರಗಿ, ಹಡಲಸಂಗ, ಕೋಳುರಗಿ, ಹೊರ್ತಿ, ಬಸನಾಳ, ತಾಂಬಾ, ಬೆನಕನಹಳ್ಳಿ, ಅಥರ್ಗಾ, ತೆನ್ನಿಹಳ್ಳಿ, ಶಿರಶ್ಯಾಡ, ಸಂಗೋಗಿ, ಕುಂಟೋಜಿ, ಮುದ್ದೇಬಿಹಾಳ, ಬಿದರಕುಂದಿ, ಕವಡಿಮಟ್ಟಿ, ಹಿರೇಮುರಾಳ, ಅಡವಿಸೋಮನಾಳ, ನಾಗರಬೆಟ್ಟ, ನಾಗರಬೇನಾಳ, ಬಿಜ್ಜೂರ, ರಕ್ಕಸಗಿ, ಆಲೂರ, ತಂಗಡಗಿ, ಕೋಳೂರ, ಹಡಲಗೇರಿ, ಯರಝುರಿ, ಕಾಳಗಿ, ಹುಲ್ಲೂರ, ಇಟಗಿ, ಹೆಬ್ಬಾಳ, ಬೀರಲದಿನ್ನಿ, ಗೊಳಸಂಗಿ, ವಂದಾಲ, ಚಿಮ್ಮಲಗಿ, ಗಣಿ, ಬೇನಾಳ, ಆಲಮಟ್ಟಿ, ಯಲಗೂರ, ಬಳಬಟ್ಟಿ, ನಿಡಗುಂದಿ, ಮಸಳಿ ಬಿ.ಕೆ., ಅರ್ಜುಣಗಿ, ನಾದ, ಸಾಲೋಟಗಿ, ರೂಗಿ, ತಡವಲಗಾ, ನಿಂಬಾಳ ಕೆ.ಡಿ., ಹಂಜಗಿ, ಚವಡಿಹಾಳ, ಬಬಲಾದ, ಭತಗುಣಕಿ, ಹಿಂಗಣಿ, ಅಹಿರಸಂಗ, ಲಚ್ಯಾಣ, ಪಡನೂರ, ಅಗರಖೇಡ, ಗುಬ್ಬೇವಾಡ, ಹಿರೇಬೇವನೂರ, ಆಲೂರ, ಇಂಗಳಗಿ, ಲಾಲಸಂಗಿ, ಖೇಡಗಿ, ಮಿರಗಿ, ರಾಮನಹಳ್ಳಿ, ಬಳಗಾನೂರ, ಕೋರಹಳ್ಳಿ, ಆಲಮೇಲ, ಕಡಣಿ, ದೇವಣಗಾಂವ, ಬಮ್ಮನಹಳ್ಳಿ, ದೇವರನಾವದಗಿ, ಮಲಘಾಣ, ಕಕ್ಕಳಮೇಲಿ, ಬಗಲೂರ, ಮೋರಟಗಿ, ಗುತ್ತರಗಿ, ಗಬಸಾವಳಗಿ, ಯರಗಲ್ಲ ಬಿ.ಕೆ., ನಾಗಾವಿ ಬಿ.ಕೆ., ಸುಂಗಠಾಣ, ಯಂಕಂಚಿ, ಗೊಲಗೇರಿ, ಹೊನ್ನಳ್ಳಿ, ಹಂದಿಗನೂರ, ಗುಬ್ಬೇವಾಡ, ಬ್ಯಾಕೋಡ, ರಾಂಪೂರ ಪಿ.ಎ., ಚಾಂದಕವಠೆ, ಹಿಕ್ಕನಗುತ್ತಿ, ಚಟ್ಟರಕಿ, ಬಂದಾಳ, ಕನ್ನೊಳ್ಳಿ, ಕೊಕಟನೂರ, ಸಿಂದಗಿ, ದೇವರಹಿಪ್ಪರಗಿ, ಮುಳಸಾವಳಗಿ, ಹಿಟ್ನಳ್ಳಿ, ಚಿಕ್ಕರೂಗಿ, ಹರನಾಳ, ಮಾರ್ಕಬ್ಬಿನಹಳ್ಳಿ, ಸಾತಿಹಾಳ, ಯಾಳವಾರ, ಮಣ್ಣೂರ, ಜಾಲವಾದ, ಕೊಂಡಗೂಳಿ, ಕೆರುಟಗಿ, ಯಲಗೋಡ, ಹುಣಶ್ಯಾಳ, ಕಳಕೇರಿ, ಬೆಕಿನಾಳ, ಅಸ್ಕಿ, ಭಂಟನೂರ, ಕೋಡಗಾನೂರ, ಬಸಾಲವಾಡಗಿ, ತುಂಬಗಿ, ಬೊಮ್ಮನಹಳ್ಳಿ, ತಾಳಿಕೋಟೆ, ಹಿರೂರ, ಸಾಸನೂರ, ಕೋಣ್ಣೂರ, ಮಿಣಜಗಿ, ಬಾವೂರ ಹಾಗೂ ಮೂಕಿಹಾಳ ಗ್ರಾಮಗಳಲ್ಲಿ ಸಂಚ–ರಿಸಲಿದೆ.

ಸ್ತಬ್ಧಚಿತ್ರ ವಾಹನ ತಂಗಲಿರುವ ಸ್ಥಳದಲ್ಲಿ ಗ್ರಾಮಪಂಚಾಯತ್‌ವಾರು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಬೇಕು. ವಿವಿಧ ಹೈಸ್ಕೂಲ್ ಮಕ್ಕಳನ್ನೊಳಗೊಂಡು ಸಂವಿಧಾನಕ್ಕೆ ಸಂಬಂಧಿಸಿದ ಕ್ವಿಜ್ ಸ್ಪರ್ಧೆ, ಚಿತ್ರಕಲಾ ಸ್ಪರ್ಧೆ, ಪ್ರಬಂಧ, ರಸಪ್ರಶ್ನೆ ಸ್ಪರ್ಧೆಗಳನ್ನು ಏರ್ಪಡಿಸುವ ಮೂಲಕ ಪ್ರತಿ ಗ್ರಾಮ ಪಂಚಾಯತ್‌ನಲ್ಲಿ ಅರ್ಧ ಗಂಟೆ ಕಾರ್ಯಕ್ರಮಗಳ ಆಯೋಜಿಸಬೇಕು. ಜಿಲ್ಲಾ ಮಟ್ಟದ ಹಾಗೂ ತಾಲೂಕಾ ಮಟ್ಟದ ನೋಡಲ್ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಯಾವುದೇ ಅಡಚಣೆ ಉಂಟಾಗದಂತೆ ಅರ್ಥಪೂರ್ಣವಾಗಿ ಜರುಗುವಂತೆ ನೋಡಿಕೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದರು.

ಸ್ತಬ್ಧಚಿತ್ರ ವಾಹನ ಸಂಚಾರಕ್ಕೆ ಅನುಕೂಲವಾಗುವಂತೆ ಸೂಕ್ತ ಪೊಲೀಸ್ ಬಂದೋಬಸ್ತ ವ್ಯವಸ್ಥೆ ಕೈಗೊಳ್ಳಬೇಕು. ಸ್ತಬ್ಧಚಿತ್ರ ವಾಹನ ಸಂಚರಿಸಲಿರುವ ವ್ಯಾಪ್ತಿಯ ಪೊಲೀಸ್ ಠಾಣೆಗೆ ಮುಂಚಿತವಾಗಿ ಮಾಹಿತಿ ಒದಗಿಸಿ ಬಂದೋಬಸ್ತ ವ್ಯವಸ್ಥೆ ಕೈಗೊಳ್ಳಬೇಕು. ಆಯಾ ತಹಶೀಲ್ದಾರು ಪೊಲೀಸ್ ಅಧಿಕಾರಿಗಳೊಂದಿಗೆ ಸಮನ್ವಯತೆಯಿಂದ ಕಾರ್ಯನಿರ್ವಹಿಸಿ ಯಾವುದೇ ಸಮಸ್ಯೆಯಾಗದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಅವರು ಸೂಚನೆ ನೀಡಿದರು.

ಜಾಗೃತಿ ಜಾಥಾ ಸ್ತಬ್ಧಚಿತ್ರ ಗ್ರಾಮ ಪಂಚಾಯತ್, ಪಟ್ಟಣ ಪಂಚಾಯತ್ ಮತ್ತು ಪುರಸಭೆ ವ್ಯಾಪ್ತಿಯಲ್ಲಿ ತಂಗುವ ಸಂದರ್ಭದಲ್ಲಿ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ, ಸಾಹಿತಿ, ಉಪನ್ಯಾಸಕರು ಸೇರಿದಂತೆ ನುರಿತ ವಿಷಯ ತಜ್ಞರನ್ನು ಆಹ್ವಾನಿಸಿ ಅವ–ರಿಂದ ಸಂವಿಧಾನ ಕುರಿತು ಉಪನ್ಯಾಸ ಕಾರ್ಯಕ್ರಮಗಳ ಆಯೋಜನೆ, ಸ್ಥಳೀಯ ಕಲಾವಿದರಿಂದ ವಿವಿಧ ಕಲೆಗಳ ಪ್ರದರ್ಶನ ಕಾರ್ಯಕ್ರಮ ಹಮ್ಮಿಕೊಳ್ಳುವಂತೆ ಅವರು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ, ವಿಜಯಪುರ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ರಾಜಶೇಖರ ಡಂಬಳ, ಇಂಡಿ ಉಪ ವಿಭಾಗಾಧಿಕಾರಿ ಅಬೀದ್ ಗದ್ಯಾಳ, ಆಹಾರ ಇಲಾಖೆಯ ಉಪ ನಿರ್ದೇಶಕ ವಿನಯಕುಮಾರ ಪಾಟೀಲ,ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಪುಂಡಲಿಕ ಮಾನವರ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಈರಣ್ಣ ಆಶಾಪೂರ, ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿ ನಿಂಗಪ್ಪ ಗೋಠೆ, ವಿಜಯಪುರ ತಹಶೀಲ್ದಾರ ಶ್ರೀಮತಿ ಕವಿತಾ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ತಹಶೀಲ್ದಾರರು ಹಾಗೂ ತಾಲೂಕು ಕಾರ್ಯ ನಿರ್ವಾಹಕ ಅಧಿಕಾರಿಗಳು ಉಪಸ್ಥಿತರಿದ್ದರು.

# ಅಪೌಷ್ಟಿಕತೆ ಹೋಗಲಾಡಿಸಲು ಶ್ರಮಿಸಿ :ಹಿರೇಮಠ



ಉದಯರಶ್ಮಿ ನ್ಯೂಸ್

ಸಿಂದಗಿ: ಮಕ್ಕಳ ತೂಕ ನಿರ್ವಹಣೆ, ಆರೋಗ್ಯ, ಶುಚಿತ್ವ, ಪೌಷ್ಟಿಕ ಆಹಾರ, ಶಾಲಾ ಪೂರ್ವ ಶಿಕ್ಷಣ, ವೈಯಕ್ತಿಕ ಸ್ವಚ್ಛತೆ, ಅಪೌಷ್ಟಿಕತೆ ಹೋಗಲಾಡಿಸುವ ಬಗ್ಗೆ ಎಚ್ಚರ ವಹಿಸಬೇಕು ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶಂಭುಲಿಂಗ ಹಿರೇಮಠ ಹೇಳಿದರು.

ತಾಲೂಕಿನ ಗಣಿಹಾರ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಹಮ್ಮಿಕೊಂಡ ಪಾಲಕರ ಸಭೆಯಲ್ಲಿ ಮಾತನಾಡಿದ ಅವರು, ಮಕ್ಕಳಿಗೆ ಮೋಬೈಲ್ ಗೀಳಿನಿಂದಾಗುವ ದುಷ್ಪರಿಣಾಮ ಹಾಗೂ ಅಪೌಷ್ಟಿಕ ಮಕ್ಕಳಿಗೆ ಎನ್.ಆರ್.ಸಿಯಲ್ಲಿ ದಾಖಲು ಮಾಡುವುದರ ಕುರಿತು ತಿಳಿಸಲಾಯಿತು. ಹಾಗೂ ಇಲಾಖೆಯ ವಿವಿಧ ಯೋಜನೆಗಳಾದ ಮಾತೃವಂದನಾ ಸುಕನ್ಯಾ ಸಮೃದ್ಧಿ, ಗೃಹಲಕ್ಷ್ಮಿ ಯೋಜನೆಗಳ ಬಗ್ಗೆ ಪಾಲಕರಿಗೆ ಹಾಗೂ ಸಾರ್ವಜನಿಕರಿಗೆ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಅಂಗನವಾಡಿ ಕೇಂದ್ರದ ಮಕ್ಕಳಿಗೆ ಆರೋಗ್ಯ ಇಲಾಖೆಯ ಸಿಬ್ಬಂದಿಯವರಿಂದ ಆನೆಕಾಲು ನಿಯಂತ್ರಣ ಮಾತ್ರೆಗಳನ್ನು ನುಂಗಿಸಲಾಯಿತು.

ಈ ವೇಳೆ ವಲಯ ಮೇಲ್ವಿಚಾರಕಿ ಸುನಿತಾ ಕಪ್ಪೆನವರ, ಅಂಗನವಾಡಿ ಕಾರ್ಯಕರ್ತೆ ಜ್ಯೋತಿ, ಆರೋಗ್ಯ ಇಲಾಖೆ ಸಿಬ್ಬಂದಿ ಸಿಎಚ್ಒಬಸವರಾಜ ಶಹಾಪುರ ಸೇರಿದಂತೆ ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಪಾಲಕರು ಹಾಗೂ ಮಕ್ಕಳು ಇದ್ದರು.

# ಅಭಿನವ ಸಂಗನಬಸವ ಸ್ವಾಮೀಜಿಗೆ ತುಲಾಭಾರ



ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ಜೀವನದಲ್ಲಿ ಯಾರು ಕೆಲಸದಲ್ಲಿ ಯಶಸ್ಸು ಪಡೆಯಲು ಹೆಚ್ಚು ಪ್ರಯತ್ನ ಪಡುತ್ತಾರೋ ಅವರು ಖಂಡಿತ ಅವರು ಕೈಗೊಳ್ಳುವ ಕೆಲಸದಲ್ಲಿ ಖಂಡಿತ ಯಶಸ್ಸು ಪಡೆಯುತ್ತಾರೆ ಎಂದು ಮನಗೂಳಿ ಸಂಸ್ಥಾನ ಹಿರೇಮಠದ ಅಭಿನವ ಸಂಗನಬಸವ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ತಾಲೂಕಿನ ಮನಗೂಳಿ ಪಟ್ಟಣದ ಸಂಸ್ಥಾನ ಹಿರೇಮಠದಲ್ಲಿ ಶುಕ್ರವಾರ ಫೆ 2 ರಿಂದ 4 ರವರೆಗೆ ವಿವಿಧ ಕಾರ್ಯಕ್ರಮದಂಗವಾಗಿ ಹಮ್ಮಿಕೊಂಡಿರುವ ಕಲಬುರಗಿಯ ಶರಣಬಸವೇಶ್ವರ ಪುರಾಣ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಶ್ರೀಮಠದ ಸದ್ಭಕ್ತರ ಸಹಕಾರದಿಂದ ಶ್ರೀಮಠದ ಅಭಿವೃದ್ಧಿಯಾಗುತ್ತಿದೆ. ಶ್ರೀಮಠದಿಂದ ಮುಂಬರುವ ದಿನಗಳಲ್ಲಿ ಬಡ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ನೆರವು ನೀಡುವ ಆಲೋಚನೆ ನಮ್ಮ ಮುಂದಿದೆ. ಫೆ.2 ರಿಂದ 4 ರವರೆಗೆ ಹಮ್ಮಿಕೊಂಡಿರುವ ವಿವಿಧ ಕಾರ್ಯಕ್ರಮದ ಯಶಸ್ವಿಗೊಳಿಸಲು ಎಲ್ಲರೂ ತನು-ಮನ-ಧನದಿಂದ ಸಹಕಾರ ಮಾಡಬೇಕೆಂದರು.

ಕಲಬುರಗಿಯ ಶರಣಬಸವೇಶ್ವರ ಪುರಾಣವನ್ನು ಮಸೂತಿಯ ಡಾ.ಶಿವಲಿಂಗಯ್ಯ ಶರಣರು ನಡೆಸಿಕೊಡುತ್ತಿದ್ದಾರೆ. ಸಂಗೀತ ಸೇವೆಯನ್ನು ಪರಶುರಾಮ ಚಟ್ನಳ್ಳಿ, ಬಸನಗೌಡ ಬಿರಾದಾರ ಸಲ್ಲಿಸುತ್ತಿದ್ದಾರೆ.

ಇದೇ ಸಂದರ್ಭದಲ್ಲಿ ಶಿವನಗೌಡ ಗುಜಗೊಂಡ ಅವರು ತಮ್ಮ ಪರಿವಾರದಿಂದ ಅಭಿನವ ಸಂಗನಬಸವ ಶಿವಾಚಾರ್ಯ ಸ್ವಾಮೀಜಿಯವ-ರಿಗೆ ನಾಣ್ಯಗಳಿಂದ ತುಲಾಭಾರ ಮಾಡಿದರು. ಎಸ್.ಐ.ಗೆಣ್ಣೂರ ಸ್ವಾಗತಿಸಿ, ನಿರೂಪಿಸಿದರು.

## ಜ.23ಕ್ಕೆ ಬನಶಂಕರಿದೇವಿ ಕಮೀಟಿಯಿಂದ ಪಾದಯಾತ್ರೆ

ಉದಯರಶ್ಮಿ ನ್ಯೂಸ್

ಕೊಲ್ಹಾರ: ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಪಟ್ಟಣದ ಬನಶಂಕರಿ ದೇವಿ ಪಾದಯಾತ್ರಾ ಕಮೀಟಿಯಿಂದ ಕೊಲ್ಹಾರದಿಂದ ಬದಾಮಿ ಬನಶಂಕರಿ ದೇವಸ್ಥಾನದವರೆಗೆ 14ನೇ ವರ್ಷದ ಪಾದಯಾತ್ರೆಯು ದಿನಾಂಕ 23 ಮಂಗಳವಾರ ಮುಂಜಾನೆ 7 ಘಂಟೆಗೆ ಸ್ಥಳಿಯ ಬನಶಂಕರಿ ದೇವಸ್ಥಾನದಲ್ಲಿ ಮಹಾಪೂಜೆಯನ್ನು ನೆರವೇ-ರಿಸಿದ ನಂತರ ಪಾದಯಾತ್ರೆಯು ಹೊರಡುವದು.

ನೂರಾರು ಭಕ್ತರು ತೆರಳುವ ಪಾದಯಾತ್ರೆಯವರನ್ನು ಸಕಲ ವಾದ್ಯ ಮೇಳದ ಬಾಜಾ ಭಜಂತ್ರಿಯವರೊಂದಿಗೆ ದಿಗಂಬರೇಶ್ವರ ಮಠದವರಗೆ ಬಿಳ್ಕೊಡಲಾಗುವದು.

ಯುಕೆಪಿ ಮಾರ್ಗವಾಗಿ ಬಾಡಗಂಡಿ, ಅನಗವಾಡಿ, ಗದ್ದನಕೇರಿ, ಸೀಮಿಕೇರಿ, ಕಗಲಗಂಬ, ಕಟಗೇರಿ, ಕಂಕಣಕೊಪ್ಪ, ಹಲಕುರ್ಕಿ, ಮುಚ್ಚಳಗುಡ್ಡ, ಬದಾಮಿ ರೇಲ್ವೆ ಸ್ಟೇಷನ್ ಮಾರ್ಗದ ಮೂಲಕ ಬನಶಂಕರಿ ದೇವಸ್ಥಾನಕ್ಕೆ ತೆರಳುವರು. ಪಾದಯಾತ್ರಿಕರಿಗೆ ಅಲ್ಪೋಪಹಾರ, ಊಟ, ವಸತಿ ಸೌಕರ್ಯಗಳನ್ನು ಭಕ್ತರು ಒದಗಿಸಿಕೊಡುತ್ತಾರೆ ಎಂದು ಪಾದಯಾತ್ರಾ ಕಮೀಟಿಯ ಈರಣ್ಣ ಬಾಲಗೊಂಡ, ಶ್ರೀಕಾಂತ ಅಮಾಶಿಗೌಡರ, ಬಸವರಾಜ ಯಡಹಳ್ಳಿ, ಬಸವರಾಜ ಚೌಡಪ್ಪಗೋಳ, ಕಲ್ಲಪ್ಪ ಪತಂಗಿ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ವಾರ್ಷಿಕ ಸ್ನೇಹ ಸಮ್ಮೇಳನ ಇಂದು

ಉದಯರಶ್ಮಿ ನ್ಯೂಸ್

ಮೋರಟಗಿ: ಗ್ರಾಮದ ಪ್ರತಿಷ್ಠಿತ ಕಲ್ಪವೃಕ್ಷ ಕಾಲೇಜಿನ ಪಿಯುಸಿ ದ್ವಿತೀಯ ವರ್ಷದ ವಿದ್ಯಾರ್ಥಿಗಳ ವಾರ್ಷಿಕ ಸ್ನೇಹ ಸಮ್ಮೇಳನ ದಿನಾಂಕ 21 ರಂದು ರವಿವಾರ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ಸದ್ಗುರು ಶಂಕರಾನಂದ ಸ್ವಾಮಿಗಳು ಆರೂಢ ಮಠ ಅಸಂಗಿಹಾಳ ದಿವ್ಯ ಸಾನಿಧ್ಯ ವಹಿಸಲಿಸಲಿದ್ದು ಸಂಸ್ಥಾಪಕ ಅಧ್ಯಕ್ಷ ಶಿವಶರಣಗೌಡ ಬಿರಾದಾರ ಅಧ್ಯಕ್ಷ ಸ್ಥಾನ ವಹಿಸಲಿದ್ದಾರೆ.

ಈ ಕಾರ್ಯಕ್ರಮದಲ್ಲಿ ವಿಶೇಷ ಸನ್ಮಾನಿತರಾಗಿ ಇಸ್ರೋ ಹಿರಿಯ ವಿಜ್ಞಾನಿ ಸಂಜೀವ ಗೌರ ಆಗಮಿಸಲಿದ್ದಾರೆ. ಮುಖ್ಯ ಅಥಿತಿಗಳಾಗಿ ಡಾ, ಪಿ. ಕೆ. ಹೊಸಮನಿ ಪಿಯು ಡಿಡಿಪಿಐ ವಿಜಯಪುರ, ಬಿ. ಟಿ. ಗೊಂಗಡಿ, ಸಿ. ಎಂ. ಬಂಡಗಾರ, ಎಸ್. ಕೆ. ಬಿರಾದಾರ, ಪಾಲಕರ ಪ್ರತಿನಿಧಿಯಾಗಿ ಎಸ್. ಎಸ್. ಪೂಜಾರಿ, ಆಡಳಿತ ಅಧಿಕಾರಿ ಎಸ್. ಎಚ್. ದುಳಬಾ, ಸಮನ್ವಯ ಅಧಿಕಾರಿ ಎಸ್. ವ್ಹಿ. ಬಿರಾದಾರ, ಪ್ರಾಚಾರ್ಯ ಡಾ, ಎ. ಬಿ. ಸಿಂದಗಿ, ಎಲ್. ಎಸ್. ಸುಲ್ತಾನಪುರ, ಪ್ರಾಚಾರ್ಯ ಎಸ್. ಬಿ. ಬಿರಾದಾರ, ವಿದ್ಯಾರ್ಥಿಗಳ ಪ್ರತಿನಿಧಿಗಳಾದ ಕುಮಾರಿ ಪಲ್ಲವಿ ಪಾರಗೊಂಡ, ಕುಮಾರ ದಾವಲಮಲಿಕ ಪಟೇಲ್ ವೇದಿಕೆ ಹಂಚಿಕೊಳ್ಳಲಿದ್ದಾರೆ ಎಂದು ಕಲ್ಪವೃಕ್ಷ ಆಡಳಿತ ಮಂಡಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಯೋಧ್ಯೆಯಲ್ಲಿ ಶ್ರೀರಾಮ ಮೂರ್ತಿ ಪ್ರತಿಷ್ಠಾಪನೆ ನಿಮಿತ್ತ ದೇವಾಸ್ಥಾನ ಸ್ವಚ್ಛತೆ

# ಎಂಇಎಸ್ ಶಿಕ್ಷಣ ಸಂಸ್ಥೆಯಿಂದ ದೇವಾಲಯಗಳ ಸ್ವಚ್ಛತೆ



ಉದಯರಶ್ಮಿ ನ್ಯೂಸ್ಚಡಚಣ:

ಇದೇ 22ರಂದು ಅಯೋಧ್ಯಯ ರಾಮ ಮಂದಿರದಲ್ಲಿ ಶ್ರೀರಾಮಲಲ್ಲಾನ ಮೂರ್ತಿ ಪ್ರತಿಷ್ಠಾಪನೆ ಹಿನ್ನಲೆಯಲ್ಲಿ ಎಂಇಎಸ್ ಶಿಕ್ಷಣ ಸಂಸ್ಥೆಯ ಪ್ರೌಢ ಹಾಗೂ ಐಟಿಐ ವಿದ್ಯಾರ್ಥಿಗಳ ವತಿಯಿಂದ ಪಟ್ಟಣದ ಹಲವಾರು ದೇವಾಲಯಗಳ ಆವರಣದಲ್ಲಿ ಸ್ವಚ್ಛತಾ ಕಾರ್ಯಕ್ರಮವನ್ನು ಶನಿವಾರದಂದು ಹಮ್ಮಿಕೊಳ್ಳಲಾಗಿತ್ತು.

ಈ ವೇಳೆಯಲ್ಲಿ ಮಾತನಾಡಿದ ಶಿಕ್ಷಕ ಮಲ್ಲು ಮಾನೆಯವರು, ಪರಿಸರದ ಸ್ವಚ್ಛತೆ ಅರಿವು ನಮಗೆ ಇಂದು ಅಗತ್ಯವಾಗಿದೆ. ಅದರಲ್ಲೂ ಇಂಥ ಸ್ಥಳಗಳು ಸ್ವಚ್ಛತೆಯಿಂದ ಕೂಡಿರಬೇಕು. ನಮ್ಮ ಪ್ರಾಚೀನ ಪರಂಪರೆಯ ದೇಗುಲಗಳು, ಶಿಲ್ಪಗಳನ್ನು ಹಾಳಾಗದಂತೆ ರಕ್ಷಿಸುವ ಜವಾಬ್ದಾರಿ ಕೂಡ ವಿದ್ಯಾರ್ಥಿಗಳು ಮಾಡಬೇಕು. ಹಿಂದಿನ ಪರಂಪರೆ ಮುಂದಿನ ಪೀಳಿಗೆಯವರೆಗೆ ಮುಟ್ಟಿಸುವ ಹೊಣೆ ನಿಮ್ಮದಾಗಬೇಕು ಎಂದರು.

ಈ ಸಂದರ್ಭದಲ್ಲಿ ಹನುಮಾನ, ಲಕ್ಷ್ಮೀ, ನವಗ್ರಹ ಹಾಗೂ ಸಂಗಮೇಶ್ವರ ದೇವಾಲಯಗಳು ಸೇರಿದಂತೆ ಪ್ರಮುಖ ದೇವಾಲಯಗಳ ಆವರಣಗಳನ್ನು ಸ್ವಚ್ಛತೆ ಮಾಡಲಾಯಿತು.

ಈ ವೇಳೆ ಅನಿಲ ಬಿಳೂರ, ಸಿ.ಕೆ.ಬಿರಾದಾರ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ನಮ್ಮ ಯಶಸ್ಸಿನ ಮೂಲವೇ ನಮ್ಮ ನಡುವಳಿಕೆ :ಕೊಣ್ಣೂರ



ಉದಯರಶ್ಮಿ ನ್ಯೂಸ್

ದೇವರಹಿಪ್ಪರಗಿ: ನಮ್ಮ ವರ್ತನೆ, ಬುದ್ಧಿವಂತೆ, ಪ್ರಯತ್ನಗಳೇ ನಮ್ಮ ನಿಜವಾದ ಅಂತಃಶಕ್ತಿಗಳು ಇವುಗಳ ಮೂಲಕ ವಿದ್ಯಾರ್ಥಿಗಳು ಯಶಸ್ಸಿನತ್ತ ಸಾಗಲು ಮುಂದಾಗಬೇಕು ಎಂದು ಕೊಣ್ಣೂರ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಬಿ.ಕೆ.ಕೊಣ್ಣೂರ ಹೇಳಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶನಿವಾರ ಜರುಗಿದ 2023-24ನೇ ಶೈಕ್ಷಣಿಕ ಸಾಲಿನ ಸಾಂಸ್ಕೃತಿಕ, ಕ್ರೀಡಾ, ರಾಷ್ಟ್ರೀಯ ಸೇವಾ ಯೋಜನೆ, ರೆಡ್‌ಕ್ರಾಸ್, ಸ್ಕೌಟ್ ಮತ್ತು ಗೈಡ್ ಚಟುವಟಿಕೆಗಳ ಉದ್ಘಾಟನಾ ಹಾಗೂ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭಕ್ಕೆ ಚಾಲನೆ ನೀಡಿ ಮಾತನಾಡಿದರು.

ನಮ್ಮ ಯಶಸ್ಸಿನ ಮೂಲವೇ ನಮ್ಮ ನಡುವಳಿಕೆ. ಆದ್ದರಿಂದ ನಾವೆಲ್ಲ ಉತ್ತಮ ಚಾರಿತ್ರ್ಯವನ್ನು ಅಳವಡಿಸಿಕೊಂಡು ಜೀವನದಲ್ಲಿ ಮುನ್ನಡೆಯೋಣ ಎಂದರು.

ವಿಜಯಪುರ ಸರ್ಕಾರಿ ಪ್ರಥ-ಮ ದರ್ಜೆ ಕಾಲೇಜಿನ ಮನಃಶಾಸ್ತ್ರ ವಿಭಾಗದ ಸಹಪ್ರಾಧ್ಯಾಪಕ ಡಾ.ಚಂದ್ರಕಾಂತ ಬಿ. ಹಾಗೂ ಇಂಡಿ ಜಿ.ಆರ್.ಜಿ ಕಾಲೇಜಿನ ಸಹ ಪ್ರಾಧ್ಯಾಪಕ ಡಾ.ಆನಂದ ನಡುವಿನಮನಿ ಮಾತನಾಡಿದರು.

ಪ್ರಾಂಶುಪಾಲ ಅಶೋಕ ಹೆಗಡೆ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ದೈಹಿಕ ಶಿಕ್ಷಣ ನಿರ್ದೇಶಕ ಡಾ.ಅಶೋಕಕುಮಾರ ಜಾಧವ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ವಿಜಯಪುರ ಸರ್ಕಾರಿ ಪ್ರಥ-ಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕಿ ಡಾ.ಮಮತಾ ಬನ್ನೂರ, ರೆಡ್‌ಕ್ರಾಸ್ ಸಂಚಾಲಕಿ ಡಾ.ದ್ರಾಕ್ಷಾಯಣಮ್ಮ ಎನ್.ಸಿ, ಐಕ್ಯೂಎಸಿ ಸಂಚಾಲಕ ಎಸ್.ಬಿ.ಜಾಲವಾದಿ, ಅಧೀಕ್ಷಕ ಜಗನ್ನಾಥ ಸಜ್ಜನ, ಪ್ರೇಮಕುಮಾರಿ.ಪಿ, ಬಿ.ಎಸ್.ಬಿರಾದಾರ, ಆಕ್ರಮ ಪಾಷಾ, ಪದ್ಮಜ ಬೆಳ್ಳಿಕಟ್ಟಿ, ಡಾ.ಜ್ಯೋತಿ ಹೂಗಾರ, ಡಾ.ಬಸವರಾಜ ಸಹಿತ ಕಾಲೇಜಿನ ಭೋಧಕ, ಭೋದಕೇತರ, ಅತಿಥಿ ಉಪನ್ಯಾಸಕ ಸಿಬ್ಬಂದಿ ಹಾಗೂ ವಿದ್ಯಾರ್ಥಿ, ವಿದ್ಯಾರ್ಥಿನೀಯರು ಇದ್ದರು.

# ಆರೋಗ್ಯವಾಗಿದ್ದರೆ ಮಾತ್ರ ಏನನ್ನೂ ಸಾಧಿಸಲು ಸಾಧ್ಯ :ಹೂಗಾರ




ಉದಯರಶ್ಮಿ ನ್ಯೂಸ್

ಇಂಡಿ: ಪ್ರತಿಯೊಬ್ಬ ವಿಕಲಚೇತನರು ತಪ್ಪದೇ ತಪಾಸಣೆ ಮಾಡಿಸಿಕೊಂಡು ಉಚಿತ ಆರೋಗ್ಯ ತಪಾಸಣೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಗ್ರಾಪಂ ಅಭಿವೃದ್ಧಿ ಅಧಿಕಾರಿ ಉಮೇಶ ಹೂಗಾರ ಹೇಳಿದರು.

ಗುರುವಾರ ತಾಲೂಕಿನ ಆಳೂರ ಗ್ರಾಮದ ಗ್ರಾಮ ಪಂಚಾಯತ್ ಆವರಣದಲ್ಲಿ ಹಮ್ಮಿಕೊಂಡಿದ್ದ ವಿಕಲಚೇತನರ ಸಂಘಟನೆಯಿಂದ 25 ರಿಂದ 70 ವರ್ಷದ ಒಳಗಿನ ವಿಕಲಚೇತನರಿಗೆ ಉಚಿತ ಆರೋಗ್ಯ ತಪಾಸಣೆ ಶಿಬಿರದಲ್ಲಿ ಅವರು ಮಾತನಾಡಿದರು.

ಒತ್ತಡದ ಜೀವನದಲ್ಲಿ ಆರೋಗ್ಯದ ಕಾಳಜಿ ವಹಿಸದೇ ಇರುವುದ-ರಿಂದ ಅನೇಕ ರೋಗಗಳಿಗೆ ತುತ್ತಾಗುವಂತಾಗಿದೆ. ಕಾರಣ ಪ್ರತಿಯೊಬ್ಬರೂ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು. ನಾವು ಆರೋಗ್ಯವಾಗಿದ್ದರೆ ಮಾತ್ರ ಏನನ್ನಾದರೂ ಸಾಧಿಸಲು ಸಾಧ್ಯ. ಇಂತಹ ತಪಾಸಣೆ ಶಿಬಿರಗಳ ಸದುಪಯೋಗ ಪಡೆದುಕೋಬೇಕು ಎಂದರು.

ಈ ಸಂದರ್ಭದಲ್ಲಿ ವಿ.ಆರ್. ಡಬ್ಲ್ಯೂ ಭೀಮಾಶಂಕರ ಗುಡ್ಡೇವಾಡಿ, ಪತ್ರಕರ್ತ ಯಲಗೊಂಡ ಬೇವನೂರ, ಚಂದ್ರಕಾಂತ ದೌಲಿ, ತಾಲೂಕಾ ಕೆ.ಎಚ್.ಪಿ.ಟಿ.ಸಂಯೋಜಕ ಶಿವಾನಂದ ಸಿಂಗೆ, ಗ್ರಾಪಂ ಸದಸ್ಯರು, ಗ್ರಾಪಂ ಕಾರ್ಯದರ್ಶಿ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಸೇರಿದಂತೆ ವಿಕಲಚೇತನರು ಭಾಗವಹಿಸಿದ್ದರು.

# ನಿಗರ್ವಿ ಹನುಮ

## ಭಾವರಶ್ಮಿ



ಡಾ. ರಾಜಶೇಖರ ನಾಗೂರ
("ನಮ್ಮ ಕಥಾ ಅರಮನೆ" ಬರಹಗಾರರು)

ಉದಯರಶ್ಮಿ ದಿನಪತ್ರಿಕೆ

ಸೀತೆಯ ಸುಳಿವನ್ನು ಹುಡುಕಿಕೊಂಡು ಬರುವ ಜವಾಬ್ದಾ-ರಿಯನ್ನು ಹನುಮನಿಗೆ ವಹಿಸಿಕೊಟ್ಟ ಮೇಲೆ ಆಗಾಧವಾದ ಸಾಗರವನ್ನು ನೆಗೆಯುವುದು ಹನುಮನಿಗೆ ಸುಲಭದ ಮಾತಾಗಿರಲಿಲ್ಲ. ಸಾಗರೋಲ್ಲಂಘನಗೈವೆ ಎಂಬ ನಂಬಿಕೆ ಸ್ವತಃ ಹನುಮನಿಗೆ ಇರಲಿಲ್ಲ.

ಧೈರ್ಯ ಮಾಡಿ ಸಾಗರವನ್ನೇನೋ ಉಲ್ಲಂಘಿಸಿದ ಆದರೆ 'ಸುರಸ' ರಾಕ್ಷಸ ರೂಪದಿ ಬಂದು ನಿನ್ನ ನುಂಗುವೆನು ಎಂದಾಗ ಅವಳನ್ನು ದಾಟಿಕೊಂಡು ಮುಂದೆ ಸಾಗುವುದು ಸವಾಲೇ ಆಗಿತ್ತು.

ಅದನ್ನೂ ದಾಟಿ ಬಂದ ಹನುಮನಿಗೆ ಲಂಕೆ ತಲುಪಿದ ಮೇಲೆ ಅದೆಷ್ಟು ಸವಾಲುಗಳು ಎದುರಾದವು. ತನಗೆ ಗೊತ್ತಿರದ, ಪರಿಚಯವೇ ಇಲ್ಲದ ರಾಕ್ಷಸ ನಾಡು ಅದಾಗಿತ್ತು. ತನ್ನ ಬಾಲಕ್ಕೂ ಬೆಂಕಿ ಬಿತ್ತು. ರಾವಣನ ಕಪಿಮುಷ್ಠಿಯಿಂದ ತಪ್ಪಿಸಿಕೊಂಡು ಬದುಕಿ ಬರುವುದು ಸುಲಭದ ಮಾತಾಗಿರಲಿಲ್ಲ.

ಇವೆಲ್ಲಾ ಸವಾಲುಗಳನ್ನು ಏಕಾಂಗಿಯಾಗಿ ಎದುರಿಸಿ ಸೀತಾ ಮಾತೆಯನ್ನು ಭೇಟಿಯಾಗಿ, ಸೀತೆಯ ಇರುವಿಕೆಯ ಮಾಹಿತಿಯನ್ನು ತೆಗೆದುಕೊಂಡು ಶ್ರೀರಾಮನ ಬಳಿ ಬಂದು ಹನುಮನು ನಿಲ್ಲುತ್ತಾನೆ.



ಆಗ ಜಾಂಬುವಂತನು ರಾಮನಿಗೆ "ಪ್ರಭು.. ಕೊಟ್ಟ ಕೆಲಸವನ್ನು ದಿಟ್ಟತನದಿ ಮಾಡಿ ಮುಗಿಸಿ ಮರಳಿ ಬಂದಿದ್ದಾನೆ ಈ ಹನುಮ" ಎನ್ನುತ್ತಾನೆ.

ಇದನ್ನು ಕೇಳಿದ ರಾಮನು ಹನುಮನ ಕಡೆ ಹಸನ್ಮುಖಿಯಾಗಿ ನೋಡುತ್ತಾನೆ.

ಆಗ ಹನುಮ: "ಪ್ರಭು ರಾಘವನೇ.. ಈ ಕೆಲಸವನ್ನು ನಾನು ಮಾಡಲಿಲ್ಲ"

ಶ್ರೀರಾಮ ಮತ್ತೆ ಜಾಂಬುವಂತನ ಕಡೆ ನೋಡುತ್ತಾನೆ.

ಆಗ ಜಾಂಬುವಂತನು " ಪ್ರಭು.. ಇಲ್ಲಾ ಇಲ್ಲಾ.. ಈ ಕೆಲಸ ಹನುಮನೇ ಮಾಡಿದ್ದಾನೆ"

ಮತ್ತೆ ಶ್ರೀರಾಮನು ಹನುಮನ ಕಡೆ ನೋಡುತ್ತಾನೆ. ಆಗ ಹನುಮ ಅದೇ ವಿನಮ್ರತೆಯಿಂದ " ಪ್ರಭು.. ಈ ಕೆಲಸವನ್ನು ನಾನು ಮಾಡಲಿಲ್ಲ" ಎನ್ನುತ್ತಾನೆ.

ಶ್ರೀ ರಾಮನು ಮತ್ತೆ ಜಾಂಬುವಂತನ ಕಡೆ ನೋಡುತ್ತಾನೆ. ಆಗ ಜಾಂಬುವಂತನು " ಹೇ.. ಪ್ರಭು.. ಈ ಕೆಲಸವನ್ನು ಹನುಮನೇ ಮಾಡಿದ್ದಾನೆ" ಎಂದು ಮತ್ತೆ ಮತ್ತೆ ಹೇಳುತ್ತಾನೆ.

ಮತ್ತೆ ಶ್ರೀ ರಾಮ ಹನುಮನ ಕಡೆ ನೋಡುತ್ತಾನೆ. ಆಗ ಹನುಮ "ಹೇ ಪ್ರಭು.. ಇಲ್ಲಾ ಇಲ್ಲಾ ನಾನು ಮಾಡಿಲ್ಲ" ಎನ್ನುತ್ತಾನೆ.

ಈ ಬಾರಿ ಶ್ರೀ ರಾಮನಿಗೆ ಜಾಂಬುವಂತ ಮತ್ತು ಹನುಮ ಇವರಿಬ್ಬರ ಮಾತುಗಳಿಂದ ಕೋಪ ಬರುತ್ತದೆ. ಕೋಪದಿಂದ ಶ್ರೀ ರಾಮನು ಹನುಮನ ಕಡೆ ನೋಡಿ " ಈ ಕೆಲಸ ನೀ ಮಾಡದಿದ್ದರೆ ನಾನು ಮಾಡಿದೆನೇ..? " ಎನ್ನುತ್ತಾನೆ.

ಆಗ ಹನುಮ" ಪ್ರಭು .. ನಾನೂ ಅದನ್ನೇ ಹೇಳಲು ಬಯಸಿದೆ. ಈ ಕಾರ್ಯವನ್ನು ನಾನು ಮಾಡಿಲ್ಲ. ನೀವೇ ಮಾಡಿದಿರಿ. ನಾವೆಲ್ಲಾ ನೆಪ ಅಷ್ಟೇ" ಎಂದು ಕೈ ಮುಗಿದು ಅದೇ ವಿನಮ್ರತೆಯಿಂದ ನುಡಿಯುತ್ತಾನೆ.

ಆಗ ಶ್ರೀರಾಮನು ಹನುಮನ ನಿರ್ಗರ್ವದ ಆ ನುಡಿಗಳಿಗೆ ಮತ್ತು ಸ್ವಾಮಿ ನಿಷ್ಠೆಗೆ ಮನಸೋಲುತ್ತಾನೆ.

ತಾತ್ಪರ್ಯ:

ಒಂದು ಸಣ್ಣ ಕೆಲಸ ಮಾಡಿದರೂ, ನಾವು ಮನುಷ್ಯರು 'ನಾನು ಮಾಡಿದೆ. ನಾನು ಮಾಡಿದೆ' ಎಂದು ಕೊಚ್ಚಿಕೊಳ್ಳುತ್ತೇವೆ.



ಹನುಮಂತನ ಜಾಗದಲ್ಲಿ ನಾವು, ನೀವು ಇದ್ದಿದ್ದರೆ "ಅರೇ.. ಪ್ರಭು.. ಲಂಕಾಗೆ ಹೋಗುವುದು ಸುಲಭದ ಮಾತಾಗಿತ್ತೇ. ಅಬ್ಬಬ್ಬಾ !..ಅದೆಂತಾ ಅಗಾಧ ಸಾಗರವದು? ನಾನೇ ಒಂದೇ ಬಾರಿಗೆ ನೆಗೆದು ಹೋದೆ ಗೊತ್ತಾ! ನನ್ನ ಜಾಗದಲ್ಲಿ ಇನ್ನೊಬ್ಬ ನಿದ್ದಿದ್ದರೆ ಈ ಕೆಲಸ ಸಾಧ್ಯವೇ ಇರುತ್ತಿರಲಿಲ್ಲ. ನಾನೇ, ನಾನೇ.. ಸೀತೆಯನ್ನು ಹುಡುಕಿ ಬಂದದ್ದು' ಎಂದೆಲ್ಲ ಕೊಚ್ಚಿಕೊಳ್ಳುತ್ತಿದ್ದೆವು.

ಇಂದಿನ ಸಮಾಜದಲ್ಲಿ ಎಲ್ಲವೂ ನನ್ನಿಂದಲೇ ಎನ್ನುವ ಕೆಲವು ಅಧಿಕಾ-ರಿಗಳು, ರಾಜಕೀಯ ಧುರೀಣರನ್ನು ಕಾಣುವುದು ಸರ್ವೇ ಸಾಮಾನ್ಯವಾಗಿದೆ.

ಕೌಟುಂಬಿಕ ಹಂತದಲ್ಲಿಯೂ ಕೆಲವು ಸದಸ್ಯರು ಎಲ್ಲವೂ ನನ್ನಿಂದಲೇ ಆಗಿದ್ದು ಎನ್ನುವುದು ಕರಗತವಾಗಿಬಿಟ್ಟಿದೆ.


ಎಲ್ಲವೂ ತನ್ನಿಂದಲೇ ಎನ್ನುವ ಇಂತಹ ಗರ್ವಿಗಳಿಗೆ ಈ ಹನುಮನು ಮಾದರಿಯಲ್ಲವೇ..!

## ಕುಡಿನೋಟ

## ಕಾವ್ಯರಶ್ಮಿ

- ರಾಜು ಗಾರೆಮನೆ
("ನಮ್ಮ ಕಥಾ ಅರಮನೆ" ಬರಹಗಾರರು)





ಮಿಂಚುಳ್ಳಿಯೊಂದು ತಾಕಿ ಧರೆಗಿಳಿದ ಮೇಘಮಾಲೆ
ಸಾವಿರ ಘಮಲ ಹೂಗಳ ಏರಿಸಿ ತಂದ ಸುಮಮಾಲೆ
ಕುಶಲವ ಕೇಳುವ ನಿನ್ನ ಕುಡಿ ನೋಟಕೆ ತಾಳುವೆನೇ ,
ಹುಬ್ಬಲ್ಲಿ ಮಾತಾಡಿ ತಬ್ಬಿಬ್ಬಾಗಿಸದೆ ಬಾ ಬೇಗ ಲಲನೆ.

ನನ್ನಂತರಂಗದ ಒಲವ ಪ್ರೀತಿಸೋ ಪ್ರೇಮೋಲ್ಲಾಸಿನಿ
ನೋಡಿದರೊಮ್ಮೆ ತಿರುಗಿ ನೋಡ ಬಯಸೋ ಶಾಲಿನಿ
ಬೆಳದಿಂಗಳಮಡಿಲಲಿ ಮಿಂದು ಬಂದ ಶಶಿಯು ನೀನು
ಅನುರಾಗ ಹರಿಸಲು ಅನುಮತಿ ಕೇಳ್ವುದು ಸರಿಯೆನು

ಏಕವಾಗಿ ಉಲ್ಲಾಸದ ಉಯ್ಯಾಲೆಯಲ್ಲಿ ಕುರೋಣ,
ಮುಗಿಲು ಧರೆಗಿರುವ ಸತ್ಸಂಬಂಧ ತಂದುಕೊಳ್ಳೋಣ
ಕಂಗಳ ಕಾಂತಿಯಲ್ಲಿ ನಮ್ಮ ಬಾಳನು ಕಳೆಗಟ್ಟಿಸೋಣ
ಭವಿತದ ಉದಯಗಳ ನಮಗಾಗಿ ಮೀಸಲಿರಿಸೋಣ.